# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –247 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:23–04–2025 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 247 | RNI No: KARKAN/2023/88462 | KA/SK/CTA-874/2024-2026 | Chitradurga | Date: 23-04-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಬಾಲ ಕಾರ್ಮಿಕರ ಪತ್ತೆ ಕಾರ್ಯಾಚರಣೆ ದಾಳಿ ಹೆಚ್ಚಿಸಿ: ಟಿ.ವೆಂಕಟೇಶ್ ಸೂಚನೆ 2

ಸಮಗ್ರ ಅಭಿವೃದ್ಧಿ ಸೂಚ್ಯಂಕ ನಿರ್ಧರಿಸುವ ಅಂಶಗಳಿಗೆ ಒತ್ತು ನೀಡಲು ಜಿಲ್ಲಾಧಿಕಾರಿ 3

ಪಂಚಾಯತಿಗಳ ಸಮಗ್ರ ಅಭಿವೃದ್ಧಿಗೆ ಕರ ವಸೂಲಿ ಅತ್ಯಗತ್ಯ: ಸೋಮಶೇಖರ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ

» **ಚಿತ್ರದುರ್ಗ**

2020–26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ತಂತ್ರಾಂಶದ ಮೂಲಕ ಸಲ್ಲಿಸಬಹುದಾಗಿರುತ್ತದೆ. ಮೇ 10 ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲೆಗಳು ಹಾಗೂ ಅಲ್ಪಸಂಖ್ಯಾತರ ಜಿಲ್ಲಾ, ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು. ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ಬಾಲಕಿ ಕಾಣೆ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕು ತೇಕಲವಟ್ಟಿ ಗೊಲ್ಲರಹಟ್ಟಿ ಗ್ರಾಮದ ನಿವಾಸಿ ಶೈಲಜಾ ಎಂಬ ಬಾಲಕಿ 2025ರ ಮಾರ್ಚ್ 19ರಂದು ಕಾಣೆಯಾಗಿರುವ ಪ್ರಕರಣ ಹೊಳಲ್ಕೆರೆ ತಾಲ್ಲೂಕು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಬಾಲಕಿಯ ಚಹರೆ ಇಂತಿದೆ. ಶೈಲಜಾ ತಂದೆ ಶಿವಪ್ಪ, 17 ವರ್ಷ, 5 ಅಡಿ ಎತ್ತರವಿದ್ದು, ಎಣ್ಣೆಗೆಂಪು ಬಣ್ಣ ಹೊಂದಿದ್ದಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಹಳದಿ ಚುಕ್ಕಿಗಳಿರುವ ಚೂಡಿದಾರ ಧರಿಸುತ್ತಾರೆ. ಈ ಮೇಲ್ಕಂಡ ಚಹರೆವುಳ್ಳ ಬಾಲಕಿ ಪತ್ತೆಯಾದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಪೊಲೀಸ್ ಉಪನಿರೀಕ್ಷಕರು ಮನವಿ ಮಾಡಿದ್ದಾರೆ.

### ವ್ಯಕ್ತಿ ಕಾಣೆ : ಪತ್ತೆ ನೆರವಿಗೆ ಮನವಿ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕು ಆದಿವಾಲ ಗ್ರಾಮದ ತಿರುಮಲ ನಗರ ನಿವಾಸಿ ನಾಗರಾಜ ತಂದೆ ಲೇ ತಿಮ್ಮಯ್ಯ (70) ಕಾಣೆಯಾದ ಕುರಿತು ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿ ನಾಗರಾಜ 5.6 ಅಡಿ ಎತ್ತರವಿದ್ದು, ಸಾಧಾರಣ ಮೈಕಟ್ಟು, ಗೋಧಿ ಮೈಬಣ್ಣ, ಕೋಲುಮುಖ ಹೊಂದಿರುತ್ತಾರೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೊರಡುವಾಗ ನೀಲಿ ಲುಂಗಿ ಪಂಚೆ, ಬಿಳಿ ಷರ್ಟ್ ಧರಿಸಿರುತ್ತಾರೆ. ಕಾಣೆಯಾದವರ ಗುರುತು ಪತ್ತೆಯಾದಲ್ಲಿ, ಹಿರಿಯೂರು ಗ್ರಾಮಾಂತರ ಪೊಲೀಸ್ ಠಾಣಾ ದೂರವಾಣಿ ಸಂಖ್ಯೆ:08193–263555, 8277985509, ಪೊಲೀಸ್ ವೃತ್ತ ನಿರೀಕ್ಷಕರ ಮೊಬೈಲ್ ಸಂಖ್ಯೆ 9480803115, ಪೊಲೀಸ್ ಉಪಾಧೀಕ್ಷಕರು ಹಿರಿಯೂರು ಉಪವಿಭಾಗ :08193–263499, ಜಿಲ್ಲಾ ಪೊಲೀಸ್ ಕಂಟ್ರೋಲ್ ರೂಂ: 08194–222782 ಕರೆ ಮಾಡಿ ಮಾಹಿತಿ ನೀಡುವಂತೆ ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.

### ಅನಾಮಧೇಯ ವ್ಯಕ್ತಿ ಸಾವು ಪತ್ತೆಗೆ ಮನವಿ


» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಭರಮಸಾಗರ ಪೊಲೀಸ್ ಠಾಣೆ ವ್ಯಾಪ್ತಿಯ ಬಿರಾವಾರ ಗ್ರಾಮದ ಗುಳ್ಳಮ್ಮ ದೇವಿ ದೇವಸ್ಥಾನದ ಬಳಿ ಅನಾರೋಗ್ಯದಿಂದ ಬಳಲುತ್ತಿದ್ದ ಅನಾಮಧೇಯ ವ್ಯಕ್ತಿಯ ಗ್ರಾಮಸ್ಥರು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲಿಸಿರುತ್ತಾರೆ. ಈ ವ್ಯಕ್ತಿ ಚಿಕಿತ್ಸೆ ಫಲಕಾರಿಯಾಗದೆ ಏಪ್ರಿಲ್ 20 ರಂದು ಮೃತಪಟ್ಟಿರುತ್ತಾರೆ. ಗೋಧಿ ಮೈ ಬಣ್ಣ ಹೊಂದಿರುತ್ತಾರೆ. ತುಂಬು ತೋಳಿನ ಬಿಳಿಯ ಬಣ್ಣದ ಶರ್ಟ್, ಕಾಫಿ ಬಣ್ಣದ ಜರಕಿನ್, ಕೆಂಪು ಬಣ್ಣದ ಡ್ರಾಯರ್, ನೀಲಿ ಮತ್ತು ಬಿಳಿ ಬಣ್ಣದ ಚೆಕ್ಸ್ ಪಂಚೆ ಧರಿಸಿರುತ್ತಾನೆ. ಮೃತ ವ್ಯಕ್ತಿಯ ಗುರುತು ಪತ್ತೆಯಾದಲ್ಲಿ, ಭರಮಸಾಗರ ಪೊಲೀಸ್ ಠಾಣಾ 08194–258421, ಪೊಲೀಸ್ ವೃತ್ತ ನಿರೀಕ್ಷಕರ ಮೊಬೈಲ್: 9480803163, ಪೊಲೀಸ್ ಉಪಾಧೀಕ್ಷಕರು ಕಚೇರಿ ಸಂಖ್ಯೆ: 08194–222430, ಕಂಟ್ರೋಲ್ ರೂಂ: 08194–222781, ವಲಯ ಕಚೇರಿ ಸಂಖ್ಯೆ 08192–237830 ಕರೆ ಮಾಡಿ.

# ಚಿತ್ರದುರ್ಗ ಕೃಷಿ ಇಲಾಖೆಗೆ ಪಂಚ ಪ್ರಶಸ್ತಿ

## ವಿವಿಧ ಯೋಜನೆಗಳ ಯಶಸ್ವಿ ಅನುಷ್ಠಾನದಲ್ಲಿ ಪ್ರಥಮ ಸ್ಥಾನ ಗಿಟ್ಟಿಸಿದ ಚಿತ್ರದುರ್ಗ ಜಿಲ್ಲೆ






» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಕೃಷಿ ಇಲಾಖೆಯು ಜಲಾನಯನ ಕಾರ್ಯಕ್ರಮಗಳಾದ ಮಣ್ಣು ಮಾದರಿಗಳ ಸಂಗ್ರಹಣೆ ಮತ್ತು ವಿಶ್ಲೇಷಣೆ, ಉದ್ಯೋಗಖಾತ್ರಿ ಯೋಜನೆ, ಕೃಷಿಕರಿಗೆ ತರಬೇತಿ ಮತ್ತು ರಾಷ್ಟ್ರೀಯ ಸುಸ್ಥಿರ ಕೃಷಿ ಯೋಜನೆಗಳನ್ನು 2024–25 ನೇ ಸಾಲಿನಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿ ಪ್ರಶಸ್ತಿ ಗಳಿಸಿದೆ.

ಕೃಷಿ ಇಲಾಖೆ ವತಿಯಿಂದ ಕಳೆದ ಏಪ್ರಿಲ್ 16 ಮತ್ತು 17 ರಂದು ಎರಡು ದಿನಗಳ ಕಾಲ ಬೆಂಗಳೂರಿನಲ್ಲಿ ಜರುಗಿದ ರಾಜ್ಯ ಮಟ್ಟದ ಮುಂಗಾರು ಹಂಗಾಮು ಕಾರ್ಯಾಗಾರದಲ್ಲಿ ಕೃಷಿ ಸಚಿವರು, ಕೃಷಿ ಆಯುಕ್ತರು ಮತ್ತು ಕೃಷಿ ನಿರ್ದೇಶಕರು ಚಿತ್ರದುರ್ಗ ಜಿಲ್ಲೆಗೆ ವಿವಿಧ ಪ್ರಶಸ್ತಿಗಳನ್ನು ಪ್ರದಾನ ಮಾಡಿದ್ದಾರೆ.

ಜಲಾನಯನ ಕಾರ್ಯಕ್ರಮಗಳಡಿ ಜಿಲ್ಲೆಯಲ್ಲಿ ವಿಶೇಷ ಕಾರ್ಯಕ್ರಮಗಳನ್ನು ರಾಜ್ಯದ ವಿವಿಧ ಜಿಲ್ಲೆಗಳಿಗಿಂತಲೂ ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದಕ್ಕಾಗಿ, ಚಿತ್ರದುರ್ಗ ಜಿಲ್ಲೆಗೆ ಪ್ರಥಮ ಸ್ಥಾನ ಲಭಿಸಿದೆ. ಎನ್‌ಎಂಎಸ್‌ಎ (ಆರ್‌ಎಡಿ)– ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ (ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ) ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ಮೊಳಕಾಲ್ಮೂರು ಮತ್ತು ಚಿತ್ರದುರ್ಗ ತಾಲ್ಲೂಕುಗಳಲ್ಲಿ ಒಟ್ಟು 60 ಆಯ್ದ ಗ್ರಾಮಗಳಲ್ಲಿ ಪ್ರತಿ ಫಲಾನುಭವಿಗೆ ರೂ.20,000/– ಗರಿಷ್ಟ ಸಹಾಯಧನ ಯೋಜನೆಯಡಿಯಲ್ಲಿ ಹಸು ವಿತರಣೆ ಮಾಡಿದ್ದು, ರೂ.404.71 ಲಕ್ಷಗಳಲ್ಲಿ ಅನುದಾನ ಭರಿಸಿ 2 ಸಾವಿರಕ್ಕೂ ಹೆಚ್ಚು ಫಲಾನುಭವಿಗಳಿಗೆ ಹಸುಗಳ ವಿತರಣೆ ಮಾಡಿ ರಾಜ್ಯದಲ್ಲಿಯೇ ಮಾದರಿಯಾಗಿದ್ದು, ಈ ಕಾರ್ಯಕ್ಕೂ ಮೊದಲ ಸ್ಥಾನವನ್ನು ಚಿತ್ರದುರ್ಗ ಜಿಲ್ಲೆ ಪಡೆದುಕೊಂಡಿದೆ.

ಅದೇ ರೀತಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ ವಿಭಾಗದಲ್ಲಿ 7,68,421 ಮಾನವ ದಿನಗಳನ್ನು ಸೃಜಿಸಲಾಗಿದ್ದು, ಮುಖ್ಯವಾಗಿ ರೈತರ ಜಮೀನಿನಲ್ಲಿ ಬದು ಮತ್ತು ಕೃಷಿಹೊಂಡ ನಿರ್ಮಾಣ ಮಾಡಿಕೊಂಡಿದ್ದು, ರಾಜ್ಯದಲ್ಲಿಯೇ ಎರಡನೇ ಸ್ಥಾನ ಲಭಿಸಿದೆ. ಒಟ್ಟಾರೆಯಾಗಿ ಬೆಂಗಳೂರು ವಿಭಾಗದಲ್ಲಿ ಜಲಾನಯನಯೋಜನೆಯಅನುಷ್ಟಾನದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಲಭಿಸಿದೆ. ಮಣ್ಣು ಪರೀಕ್ಷಾ ಪ್ರಯೋಗಾಲಯಕ್ಕೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ: 2024–25ನೇ ಸಾಲಿನಲ್ಲಿ ಮಣ್ಣು ಆರೋಗ್ಯ ಅಭಿಯಾನ ಕಾರ್ಯಕ್ರಮದಡಿ ಮಣ್ಣು ಪರೀಕ್ಷಾ ಪ್ರಯೋಗಾಲಯಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಚಿತ್ರದುರ್ಗ ಜಿಲ್ಲೆಯ ಮಣ್ಣು ಪರೀಕ್ಷಾ ಪ್ರಯೋಗಾಲಯಕ್ಕೆ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಲಭಿಸಿದೆ.

"ನಾವು ಸತ್ತರೆ ಮಣ್ಣಿಗೆ, ಮಣ್ಣು ಸತ್ತರೆ ಎಲ್ಲಿಗೆ, ಮಣ್ಣಿನ ಆರೋಗ್ಯದಿಂದ ಬೆಳೆಗಳ ಆರೋಗ್ಯ – ನಮ್ಮ ಆರೋಗ್ಯ" ಈ ನಿಟ್ಟಿನಲ್ಲಿ ಗ್ರಾಮಗಳಲ್ಲಿ ಮಣ್ಣು ಆರೋಗ್ಯ ಅಭಿಯಾನ ಕಾರ್ಯಕ್ರಮದಡಿ ಮಣ್ಣು ಪರೀಕ್ಷೆ ಮಹತ್ವ, ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರ ಸಮರ್ಥ ಬಳಕೆ ಕುರಿತು ಸಕಾಲದಲ್ಲಿ 29,665 ಜಿಲ್ಲೆಯ ರೈತರಿಗೆ ಮಣ್ಣು ಆರೋಗ್ಯ ಚೀಟಿ ನೀಡಿರುವ ಪ್ರಯುಕ್ತ 2024–25ನೇ ಸಾಲಿನಲ್ಲಿ ರಾಜ್ಯದಲ್ಲಿ ರಾಜ್ಯದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನಕ್ಕೆ ಭಾಜನವಾಗಿರುವುದು ಹೆಮ್ಮೆಯ ವಿಷಯವಾಗಿದೆ.

**ಬಬ್ಬೂರಿನ ಜಿಲ್ಲಾ ಕೃಷಿ ತರಬೇತಿ ಕೇಂದ್ರಕ್ಕೆ ಪ್ರಶಸ್ತಿ:** ಹಿರಿಯೂರು ತಾಲ್ಲೂಕಿನ ಬಬ್ಬೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರವು ಕಾರ್ಯಕ್ರಮಗಳ ಅನುಷ್ಠಾನದಲ್ಲಿ ತೋರಿದ ಅತ್ಯುತ್ತಮ ಸಾಧನೆ ಗುರುತಿಸಿ, ಕೃಷಿ ಇಲಾಖೆಯು 2024–25ನೇ ಸಾಲಿನ ರಾಜ್ಯಮಟ್ಟದ ದ್ವಿತೀಯ ಪ್ರಶಸ್ತಿ ನೀಡಿದೆ. ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಜಿಲ್ಲೆಯ ರೈತಬಾಂಧವರಿಗೆ ಕೃಷಿ ಮತ್ತು ಕೃಷಿ ಸಂಬಂಧಿತ ವಿಷಯಗಳು ಹಾಗೂ ಆರೋಗ್ಯಕರ ಆಹಾರ ಪದ್ಧತಿ ಮತ್ತು ಜೀವನ ಶೈಲಿ ಕುರಿತು ಸಾಂಸ್ಥಿಕ, ಹೊರಾಂಗಣ, ಗೂಗಲ್ ಮೀಟ್ ಮೂಲಕ ಅಂತರಜಾಲ ತರಬೇತಿಗಳನ್ನು ವ್ಯಾಪಕ ಪ್ರಚಾರ ನೀಡಿ, ರೈತರು ಸ್ವ ಆಸಕ್ತಿಯಿಂದ ತರಬೇತಿಯನ್ನು ಪಡೆಯಲು ಅನುಕೂಲಕರವಾಗಿದೆ. ಅಲ್ಲದೆ ಯುವ ರೈತರನ್ನು ಕೃಷಿಯಲ್ಲಿ ತೊಡಗಿಸಿಕೊಳ್ಳಲು ಸಾಮಾಜಿಕ ಜಾಲತಾಣ ಬಳಸಿಕೊಂಡು ಅವರ ಬೆರಳ ತುದಿಯಲ್ಲಿಯೇ ತಾಂತ್ರಿಕ ಮಾಹಿತಿಯನ್ನು ಫೇಸ್ಬುಕ್ ಮತ್ತು ಯೂಟ್ಯೂಬ್ ಚಾನಲ್ ಮೂಲಕ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರಾದ ಆರ್. ರಜನೀಕಾಂತ ಅವರು ನೀಡುತ್ತಿರುವ ವಿನೂತನ ಕಾರ್ಯದಕ್ಷತೆ ಗುರುತಿಸಿ ಕೃಷಿ ಇಲಾಖೆಯ 2025–26 ನೇ ಸಾಲಿನ ರಾಜ್ಯ ಮಟ್ಟದ ಮುಂಗಾರು ಹಂಗಾಮಿನ ಕಾರ್ಯಗಾರದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಅತ್ಯುತ್ತಮ ಸಾಧನೆಗೆ ದ್ವಿತೀಯ ಸ್ಥಾನದ ಪ್ರಶಸ್ತಿ ನೀಡಲಾಗಿದೆ.

2024–25ನೇ ಸಾಲಿನ ವಿವಿಧ ಜಲಾನಯನ ಅಭಿವೃದ್ಧಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಚಿತ್ರದುರ್ಗ ಜಿಲ್ಲೆಗೆ ಪ್ರಥಮ ಸ್ಥಾನ ಲಭಿಸಿರುವ ಪ್ರಯುಕ್ತ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಾಗೂ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ ಅವರು ಹರ್ಷ ವ್ಯಕ್ತಪಡಿಸಿ ಕೃಷಿ ಇಲಾಖೆ ಅಧಿಕಾರಿಗಳನ್ನು ಅಭಿನಂದಿಸಿದ್ದು, ಬರುವ ದಿನಗಳಲ್ಲಿ ಕೃಷಿ ಇಲಾಖೆಯು ಇನ್ನಷ್ಟು ಜವಾಬ್ದಾರಿಯುತವಾಗಿ, ರೈತೋಪಯೋಗಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸುವಂತೆ ಮನವಿ ಮಾಡಿದ್ದಾರೆ.

## ಪ್ರಮುಖ ಸುದ್ದಿ

# ಕಾರ್ಯಕರ್ತರು ಸರ್ಕಾರದ ಕಾರ್ಯಕ್ರಮ ಮತ್ತು ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಿ; ಚುನಾವಣೆ ಎದುರಿಸಲು ಸಿದ್ಧರಾಗಿ

» **ಹೊಸದುರ್ಗ**

ಪಕ್ಷದ ಹೈಕಮಾಂಡ್ ಮತ್ತು ರಾಜ್ಯ ನಾಯಕರು ಮುಂಬರುವ ಜಿ.ಪಂಮತ್ತು ತಾ.ಪಂ ಚುನಾವಣೆಗೆ ಸಿದ್ಧತೆ ಮಾಡಿಕೊಳ್ಳಿ ಎಂದು ಆದೇಶಿಸಿದ್ದು, ಅವರ ಆದೇಶದ ಮೇರೆಗೆ ಸರ್ಕಾರದ ನಡೆ ಕಾರ್ಯಕರ್ತರ ಕಡೆ ಎಂಬ ಕಾರ್ಯಕ್ರಮವನ್ನು ಮಾಡಲಾಗುತ್ತಿದೆ. ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಸರ್ಕಾರದ ಕಾರ್ಯಕ್ರಮ ಮತ್ತು ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸಿ. ಮುಂಬರುವ ಚುನಾವಣೆ ಎದುರಿಸಲು ಸಿದ್ಧರಾಗಿ ಎಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕರೆ ನೀಡಿದರು.

ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ "ಸರ್ಕಾರದ ನಡೆ ಕಾರ್ಯಕರ್ತರ ಕಡೆ" ಎಂಬ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

2023ರ ವಿಧಾನಸಭಾ ಚುನಾವಣೆಯಲ್ಲಿ ಶತಾಯಗತಾಯ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆತರಲೇಬೇಕೆಂದುನಮ್ಮಕಾಂಗ್ರೆಸ್ ಪಕ್ಷದ ಹೈಕಮಾಂಡ್, ರಾಜ್ಯ ನಾಯಕರು ಹಾಗೂ ಕಾರ್ಯಕರ್ತರು ಕಾಲಿಗೆ ಚಕ್ರ ಕಟ್ಟಿಕೊಂಡು ಹಳ್ಳಿಹಳ್ಳಿಗೂ ತಿರುಗಿದರು. 2013ರಲ್ಲಿ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರದ ಸಾಧನೆ, ನಂತರ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರದ ಲೋಪಗಳ ಬಗ್ಗೆ ಜನರ ಮನೆಬಾಗಿಲಿಗೆ ಮುಟ್ಟಿಸಲಾಯಿತು. ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಇನ್ನಿತರ ಎಲ್ಲಾ ನಾಯಕರು ಹಾಗೂ ಕಾರ್ಯಕರ್ತರ ಪರಿಶ್ರಮದಿಂದ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರದ ಗದ್ದುಗೆ ಹಿಡಿದಿದೆ ಎಂದರು.



ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಪಕ್ಷದ ಆದೇಶದಂತೆ ನಾವು–ನೀವೆಲ್ಲರೂ ಮುಂಬರುವ ಚುನಾವಣೆಗೆ ಸಿದ್ಧಗೊಳ್ಳಬೇಕಿದೆ. 1986 ರಿಂದಲೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ಮಾಡಿಕೊಂಡು ಬಂದಿದ್ದೇನೆ. ಈ ಬಾರಿ ಚಿತ್ರದುರ್ಗ ಜಿ.ಪಂ ಮತ್ತು ಹೊಸದುರ್ಗ ತಾಲ್ಲೂಕು ಪಂಚಾಯಿತಿಯನ್ನು ಕಾಂಗ್ರೆಸ್ ತೆಕ್ಕೆಗೆ ತೆಗೆದುಕೊಳ್ಳಲೇಬೇಕು. ಇದಕ್ಕಾಗಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಎಲ್ಲಾ ಶಾಸಕರು, ಮಾಜಿ ಶಾಸಕರು, ಮಾಜಿ ಸಂಸದರು, ಜಿ.ಪಂ, ತಾ.ಪಂ ಮಾಜಿ ಸದಸ್ಯರು ಹಾಗೂ ಪಕ್ಷದ ಎಲ್ಲಾ ಕಾರ್ಯಕರ್ತರು ಒಗ್ಗಟ್ಟಾಗಿ ಕೆಲಸ ಮಾಡಬೇಕಿದೆ ಕಿವಿಮಾತು ಹೇಳಿದರು.

ಶಾಸಕರು, ಚಳ್ಳಕೆರೆ ವಿಧಾನಸಭಾ ಕ್ಷೇತ್ರ ಶಾಸಕ ಟಿ.ರಘುಮೂರ್ತಿ ಮಾತನಾಡಿ ರಾಜಕೀಯ ಎಲ್ಲಾ ಪಕ್ಷಗಳಲ್ಲಿ, ಎಲ್ಲ ಸಂದರ್ಭಗಳಲ್ಲಿಯೂ ಭಿನ್ನಾಭಿಪ್ರಾಯ ಗಳು ಇದ್ದೇ ಇರುತ್ತವೆ. ಅವುಗಳನ್ನು ದೊಡ್ಡದಾಗಿ ಮಾಡದೆ, ಪಕ್ಷದ ಹಿತದೃಷ್ಟಿಯಿಂದ ಹೊಂದಿಕೊಂಡು ಹೋಗಬೇಕು. ಎಂದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಸದಸ್ಯರಾದ ಎಂ.ಪಿ. ಶಂಕರ್, ಅಲ್ತಾಫ್ ಪಾಷಾ, ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ, ಜಿಲ್ಲಾ ಕಾಂಗ್ರೆಸ್ ಘಟಕದಅಧ್ಯಕ್ಷತಾಜ್‌ಪೀರ್,ಕಾರ್ಯದರ್ಶಿ ಹಾಲೇಶ್, ಹೊಸದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ, ಶ್ರೀರಾಂಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಲೋಕೇಶ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮಂಜುನಾಥ್, ನಿರ್ದೇಶಕ ಕೆ.ಅನಂತ್, ಕೆಡಿಪಿ ಸದಸ್ಯೆ ದೀಪಿಕಾ ಮುಖಂಡರಾದ ಆಗ್ರೋ ಶಿವಣ್ಣ, ಕಾರೆಹಳ್ಳಿ ಬಸವರಾಜ್ ಮತ್ತು ಜಾಫರ್‌ಸಾಧಿಕ್ ಸೇರಿದಂತೆ ನೂರಾರು ಕಾರ್ಯಕರ್ತರ ಭಾಗವಹಿಸಿದ್ದರು.

**ಸಚಿವ ಮತ್ತು ಕೆಪಿಸಿಸಿ ಸದಸ್ಯನ ನಡುವೆ ಕಿರಿಕ್:** ಕಾರ್ಯಕ್ರಮದ ಆರಂಭದಲ್ಲಿ ಸ್ವಾಗತ ಭಾಷಣ ಮಾಡುತ್ತಿದ್ದ ಕೆಪಿಸಿಸಿ ಸದಸ್ಯ ಎಂ.ಪಿ.ಶಂಕರ್ ಪ್ರಾಸ್ತಾವಿಕವಾಗಿ ಮಾತನಾಡಲು ಆರಂಭಿಸಿದಾಗ, ವೇದಿಕೆ ಮೇಲಿದ್ದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಬಹಳ ಹೊತ್ತು ಮಾತನಾಡಬೇಡಿ, 2 ನಿಮಿಷ ಅಷ್ಟೇ ಮಾತನಾಡಿ ಎಂದರು. ಇದಕ್ಕೆ ಆಕ್ರೋಶಗೊಂಡ ಕೆಪಿಸಿಸಿ ಸದಸ್ಯ ಪಕ್ಷ ಅಧಿಕಾರಕ್ಕೆ ತರಲು ನಾವು ಕೂಡ ಬಹಳ ಶ್ರಮಿಸಿದ್ದೇವೆ. ನಮಗೆ ಮಾತನಾಡಲು ಅವಕಾಶವೇ ಇಲ್ಲವೆಂದರೆ ಹೇಗೆ? ನಾವು ಎಷ್ಟೇ ಪಕ್ಷಕ್ಕಾಗಿ ದುಡಿದರು ನಮಗೆ ಎಷ್ಟೇ ಗೌರವ. ನನಿಗೂ ಕೂಡ ಪಕ್ಷದಲ್ಲಿ ಜವಾಬ್ದಾರಿ ನೀಡಲಾಗಿದೆ. ನೀವು ಹೀಗೆ ಮಾತನಾಡುವುದು ಸರಿಯಲ್ಲವೆಂದು ಸಚಿವರ ವಿರುದ್ಧ ಆಕ್ರೋಶಗೊಂಡರು. ಪರಿಸ್ಥಿತಿ ತಿಳಿಗೊಳಿಸಲು ಮಧ್ಯಪ್ರವೇಶಿಸಿದ ಶಾಸಕರು ಇಬ್ಬರನ್ನು ಕೆಪಿಸಿಸಿ ಸದಸ್ಯರನ್ನು ಸಮಾಧಾನಪಡಿಸಿ, ನಿಮ್ಮ ಮಾತು ಮುಂದುವರಿಸಿ ಎಂದು ಹೇಳಿದರು.

## ಫಾಸ್ಟ್ ನ್ಯೂಸ್

### ಮಮ್ಮೋಗನ ಅರಸ್ಟ್: ಅಜ್ಜಿ ಹೃದಯಾಘಾತದಿಂದ ಸಾವು

» **ಹೊಸದುರ್ಗ**



ಲೋಕಾಯುಕ್ತರ ಬಲೆಗೆ ಸಿಕ್ಕಿಬಿದ್ದು ಅರಸ್ಟ್ ಆಗಿ ಬಂಧನಕ್ಕೊಳಗಾಗಿರುವ ತನ್ನ ಮಮ್ಮೋಗನ ವಿಷಯವನ್ನ ಕೇಳಿದ ಅಜ್ಜಿ ಎದೆ ಎದೆ ಬಡಿದುಕೊಂಡು ಗೋಳಾಡುತ್ತಿದ್ದ ಸಂಧರ್ಬದಲ್ಲಿ ಕುಸಿದು ಬಿದ್ದು ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ತಾಲೂಕಿನ ಶ್ರೀರಾಂಪುರ ಹೋಬಳಿ ಖಾಳನಾಯಕನಹಟ್ಟಿ (ಗರೀಂಬೀಳು) ಗ್ರಾಮದಲ್ಲಿ ಮಂಗಳವಾರ ಬೆಳಿಗ್ಗೆ ಸುಮಾರು 7.30 ರಲ್ಲಿ ನಡೆದಿರುವ ಘಟನೆ ಬೆಳಕಿಗೆ ಬಂದಿದೆ ಹೃದಯಾಘಾತಕ್ಕೆ ಒಳಗಾಗಿ ಸಾವನ್ನಪ್ಪಿರುವ ಮಹಿಳೆಯನ್ನು ತಾಲೂಕಿನ ಶ್ರೀರಾಂಪುರ ಹೋಬಳಿ ಖಾಳನಾಯಕನಹಟ್ಟಿ ಗ್ರಾಮದ ಲೇಟ್ ಗೋವಿಂದಪ್ಪ ಎಂಬುವವರ ಪತ್ನಿ ಕೆಂಚಮ್ಮ (65) ಎಂದು ತಿಳಿದು ಬಂದಿದ್ದು ಕೆಂಚಮ್ಮ ಗೋವಿಂದಪ್ಪ ಎಂಬುವವರ ಮಗ ಲೇಟ್ ವೆಂಕಟರಾಮಯ್ಯನ ಎರಡನೇ ಮಗನೇ ತಿಮ್ಮರಾಜು ಜಿ.ವಿ.

**ಘಟನೆ:** ಪಟ್ಟಣದ ಪುರಸಭಾ ಸದಸ್ಯ ಶಂಕರಪ್ಪ ಎಂಬುವವರಿಂದ 25 ಸಾವಿರ ಹಣ ಪಡೆಯುತ್ತಿದ್ದ ಸಂಧರ್ಬದಲ್ಲಿ ಪಟ್ಟಣದ ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ. ಲೋಕಾಯುಕ್ತರ ಕೈಗೆ ಸೋಮವಾರ ಸಂಜೆ ಸಿಕ್ಕಿಬಿದ್ದಿದ್ದರು. ಲೋಕಾಯುಕ್ತ ಪೋಲಿಸರು ತಿಮ್ಮರಾಜುವನ್ನು ಅರಸ್ಟ್ ಮಾಡಿಕೊಂಡು ಚಿತ್ರದುರ್ಗಕ್ಕೆ ಕರೆದುಕೋಂಡು ಹೋಗಿದ್ದಾರೆ ಮುಂದೆ ಹೇನಾಗುವುದೋ ಎಂದು ಮನೆಯ ಕುಟುಬಸ್ಥರು ಮಾತನಾಡಿ ಕೊಳ್ಳುತ್ತಿರುವುದನ್ನು ಕೇಳಿಸಿಕೊಂಡ ಅಜ್ಜಿ ಕುಟಂಬಸ್ಥರಿಂದ ಸಂಪೂರ್ಣ ವಿಷಯವನ್ನ ತಿಳಿದ ನಂತರ ನನ್ನ ಮಮ್ಮೋಗ ಅಂತವನಲ್ಲ ಒಳ್ಳೆಯವನು ಎಂದು ಎದೆ ಎದೆ ಬಡಿದುಕೊಂಡು ನೆಲಕ್ಕೆ ಕುಸಿದು ಬಿದ್ದಿದ್ದಾರೆ, ಕಸಿದು ಬಿದ್ದ ಕೆಂಚಮ್ಮನನ್ನ ಕುಟುಂಬಸ್ಥರು ಕೂಡಲೇ ಹತ್ತಿರದ ಶ್ರೀರಾಂಪುರ ಆಸ್ಪತ್ರೆಗೆ ದಾಖಲಿಸಿದ್ದಾರೆ, ತಕ್ಷಣ ವೈದ್ಯರು ಪರೀಕ್ಷಿಸಿ ನೋಡಿದಾಗ ಕೆಂಚಮ್ಮ ಹೃದಯಾಘಾತದಿಂದ ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

### ಇಂದು ಶ್ರೀ ದುರ್ಗಾಂಬಿಕ ದೇವಿಯವರ ಸಿಡಿ ಉತ್ಸವ

» **ಹೊಸದುರ್ಗ**

ಪಟ್ಟಣದ ಗ್ರಾಮ ದೇವತೆಯಾದ ಶ್ರೀ ದುರ್ಗಾಂಬಿಕ ದೇವಿಯವರ ಸಿಡಿ ಉತ್ಸವವು ಏ.23 ರಂದು




ಬುಧುವಾರ ಮದ್ಯಾಹ್ನ 4 ಗಂಟೆ ಸುಮಾರಿಗೆ ಪಟ್ಟಣದ ಬಂಡೆ ಸಂತೆಯ ಸಮೀಪ ಜರುಗಲಿದೆ. ನಾಡಿನ ನಾನಾ ಜಾತ್ರೆಗಳನ್ನು ನೋಡಿದ್ದೇವೆ. ಸವಿಯನ್ನು ಸಹ ಕಣ್‌ತುಂಬಾ ನೋಡಿ ಆನಂದಿಸಿದ್ದೇವೆ.ಒಮ್ಮೊಮ್ಮೆ ಆಶ್ಚರ್ಯಚಕಿತನಾಗಿ ನಿಂತಿದ್ದೇನೆ. ಏಕೆಂದರೆ ಸಿಡಿ ಎಂದರೆ ಭಕ್ತಾಧಿಗಳು ಹರಿಕೆ ಮಾಡಿಕೊಂಡು ತಾವೇ ಕಂಬಕ್ಕೆ ಹಗ್ಗವನ್ನು ಕಟ್ಟಿ ಸೊಂಟಕ್ಕೆ ಬಟ್ಟೆಯನ್ನು ಕಟ್ಟಿಕೊಂಡು ಮೂರು ಬಾರಿ ಸುತ್ತುತ್ತಾರೆ. ಆದರೆ ಇಲ್ಲಿ ಹಾಗಲ್ಲ... ಇಲ್ಲಿನ ಸಿಡಿ ಕಂಬ ಸುಮಾರು ಮೂರು ತಲೆಮಾರಿನಾದಾಗಿದ್ದು ಸಿಡಿ ಕಂಬಕ್ಕೆ ತಾಯಿ ದುರ್ಗಾಂಬಿಕ ದೇವಿಯನ್ನು ಕಂಬಕ್ಕೆ ಕಟ್ಟಿ ಮೂರು ಸುತ್ತು ಸುತ್ತರಿಸುತ್ತಾರೆ. ಈ ಸಿಡಿ ಉತ್ಸವವನ್ನು ನೋಡಲು ಈ ಸಿಡಿ ಉತ್ಸವವನ್ನು ನೋಡಲು ನಾನಾ ಭಾಗಗಳಿಂದ ಸುಮಾರು ಇಪ್ಪತ್ತು ಸಾವಿರಕ್ಕೆ ಹೆಚ್ಚು ಭಕ್ತಾಧಿಗಳು ಸೇರಿರುತ್ತಾರೆ. ದೇವಿಯ ಸಿಡಿ ಕಂಬವನ್ನು ಹತ್ತುವಾಗ ನೆರೆದಿದ್ದ ಭಕ್ತಾಧಿಗಳು ಗೊನೆಗಟ್ಟಲೇ ಬಾಳೇ ಹಣ್ಣುಗಳನ್ನು ಖರೀದಿಸಿ ತಾಯಿ ದುರ್ಗಮ್ಮನ ಮೇಲೆ ಉದೋ ಉದೋ ಎಂದು ತೂರುತ್ತಾರೆ ಜೋತೆಗೆ ಸೋಮನ ಕುಣಿತವೂ ಕೂಡ ಆಕರ್ಷಕವಾಗಿರುತ್ತದೆ.

### ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನ

» **ದಾವಣಗೆರೆ**

ಹರಿಹರ ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಕಾರ್ಯಕ್ರಮದಡಿ ಸಣ್ಣ, ಅತಿಸಣ್ಣ, ಪರಿಶಿಷ್ಟಜಾತಿ, ಹಾಗೂ ಪರಿಶಿಷ್ಟ ಪಂಗಡದ ಅರ್ಹ ರೈತರು ಅರ್ಜಿ ಸಲ್ಲಿಸಬಹುದು. ಈ ಯೋಜನೆಯಡಿಯಲ್ಲಿ ತೋಟಗಾರಿಕೆ ಬೆಳೆಗಳಾದ ವೀಳ್ಯದೆಲೆ, ತೆಂಗು, ಮಾವು, ಸಪೋಟ, ಸೀಬೆ, ಅಂಗಾಂಶಬಾಳೆ, ಪಪ್ಪಾಯ, ಕರಿಬೇವು, ಕಾಳುಮೆಣಸು, ಕೋಕೋ, ನೇರಳೆ, ಸೀತಾಫಲ, ಡ್ರ್ಯಾಗಫ್ರೂಟ್, ಮಲ್ಲಿಗೆ, ಗುಲಾಬಿ ಇತ್ಯಾದಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ಮೇ.10 ರೊಳಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಹರಿಹರ ಕಛೇರಿಗೆ ಅಥವಾ ಆಯಾ ಗ್ರಾಮಪಂಚಾಯತಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿಮಟ್ಟದ ಸಹಾಯಕ ತೋಟಗಾರಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ತಿಳಿಸಿದ್ದಾರೆ.

# ಬಾಲ ಕಾರ್ಮಿಕರ ಪತ್ತೆ ಕಾರ್ಯಾಚರಣೆ ದಾಳಿ ಹೆಚ್ಚಿಸಿ: ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

» **ಚಿತ್ರದುರ್ಗ**

ಬಾಲ ಕಾರ್ಮಿಕರ ಪತ್ತೆಗೆ ಜಿಲ್ಲೆಯಾದ್ಯಂತ ಹೆಚ್ಚಿನಪ್ರಮಾಣದಲ್ಲಿದಾಳಿಕಾರ್ಯಾಚರಣೆ ನಡೆಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಪಡೆ ಮತ್ತು ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಸಂಬಂಧ ತಾಲ್ಲೂಕು ಮಟ್ಟದಲ್ಲಿ ಕಾರ್ಯಪಡೆಗಳನ್ನು ರಚಿಸಿ ಕಾರ್ಮಿಕ ಇಲಾಖೆ ಅಧಿಕಾರಿಗಳು ತಾ.ಪಂ. ಇಓ, ಬಿಇಓ, ಸಿಡಿಪಿಓ ಹಾಗೂ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆ ಕೈಗೊಳ್ಳಬೇಕು. ಗಣಿ, ಕಲ್ಲು ಕ್ವಾರಿ, ಪೌಲ್ಟ್ರೀಫಾರಂ, ಇಟ್ಟಿಗೆಭಟ್ಟಿ, ಹೋಟೆಲ್, ಗ್ಯಾರೇಜುಗಳಲ್ಲಿ ಹಠಾತ್ ದಾಳಿ ನಡೆಸಿ ತಪಾಸಣೆ ಕೈಗೊಳ್ಳಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲಕಾರ್ಮಿಕರಾಗಿ ಕೆಲಸ ಮಾಡುವ ಸಂಭವ ಹೆಚ್ಚು ಇರುತ್ತದೆ. ಇವರನ್ನು ರಕ್ಷಿಸಿ ಪುನರ್ವಸತಿ ಕಲ್ಪಿಸಬೇಕು, ಜೊತೆಗೆ ಶಿಕ್ಷಣದ ಮುಖ್ಯ ವಾಹಿನಿಗೆ ತರುವ ಕೆಲಸ ಆಗಬೇಕು. ಗಣಿ, ಕಲ್ಲು ಕ್ವಾರಿ ಕೆಲಸದಲ್ಲಿ ಬಾಲ ಕಾರ್ಮಿಕರು ಕಂಡು ಬಂದರೆ ಸಂಬಂದಪಟ್ಟ ಗಣಿಗಾರಿಕೆ ಲೈಸೈನ್ಸ್ ರದ್ದು ಮಾಡಿ, ಪ್ರಕರಣ ದಾಖಲಿಸುವಂತೆ




ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ನಡೆಸಬೇಕು. ಬೀದಿ ನಾಟಕಗಳ ಪ್ರದರ್ಶನದ ವೇಳೆ ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ. ಗ್ರಾಮ ಪಂಚಾಯಿತಿಗಳಲ್ಲಿ ಬಾಲ ಕಾರ್ಮಿಕ ನಿಷೇಧ ಕಾಯ್ದೆಯ ಸೂಚನಾ ಫಲಕಗಳನ್ನು ಅಳವಡಿಸುವಂತೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.ಜಿಲ್ಲಾ ಕಾರ್ಮಿಕಾಧಿಕಾರಿ ಅನಿಲ್ ಬಾಲಚಂದ್ರ ಭಗತಿ ಮಾತನಾಡಿ, 2024–25 ಸಾಲಿನಲ್ಲಿ ಒಟ್ಟು 1045 ಬಾಲ ಕಾರ್ಮಿಕ ಪತ್ತೆ ಕಾರ್ಯಾಚರಣೆ ದಾಳಿಗಳನ್ನು ನಡೆಸಲಾಗಿದೆ. 6 ಮಕ್ಕಳನ್ನು ರಕ್ಷಿಸಿ ಪುನರ್ವಸತಿ ಕಲ್ಪಿಸಲಾಗಿದೆ, ನಾಲ್ವರು ಮಾಲೀಕರ ವಿರುದ್ಧ ಮೊಕದ್ದಮೆ ಹೂಡಲಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಬೈಲಾ ತಿದ್ದುಪಡಿ ಮಾಡಿ, ಸಂಚಿತ ನಿಧಿ ಬ್ಯಾಂಕ್ ಖಾತೆಯ ಹೆಸರನ್ನು ಬದಲಿಸುವ ಕುರಿತು ತೀರ್ಮಾನ ಕೈಗೊಳ್ಳಲಾಯಿತು.

**ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪನೆ:** ವಿವಿಧ ಇಲಾಖೆಗಳಿಗೆ ಹೊರ ಗುತ್ತಿಗೆ ಕಾರ್ಮಿಕರ ಸೇವೆ ಒದಗಿಸಲು ಬೀದರ್ ಜಿಲ್ಲಾ ಮಾದರಿಯಂತೆ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪನೆ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಹೊರಗುತ್ತಿಗೆ ಕಾರ್ಮಿಕರನ್ನು ಒದಗಿಸುವ ಕಂಪನಿಗಳು ಇಎಸ್‌ಐ,ಪಿ.ಎಫ್.ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡುವುದಿಲ್ಲ ಎಂಬ ದೂರುಗಳು ವ್ಯಾಪಕವಾಗಿವೆ. ಇದರ ಬದಲಾಗಿ ಕಾರ್ಮಿಕ ಇಲಾಖೆಯ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪಿಸಿ, ಈ ಸೊಸೈಟಿಯಿಂದ ಮಾನವ ಸಂಪನ್ಮೂಲವನ್ನು ವಿವಿಧ ಇಲಾಖೆಗಳಿಗೆ ಒದಗಿಸಬಹುದು. ಜಿಲ್ಲೆಯಲ್ಲಿ ಸುಮಾರು 800 ಹೆಚ್ಚು ಹೊರಗುತ್ತಿಗೆ ನೌಕರರು ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರದ ಸೂಚನೆಯಂತೆ ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಭ್ಯರ್ಥಿಗಳಿಗೆ ಹೊರಗುತ್ತಿಗೆ ಕೆಲಸದಲ್ಲಿ ಮೀಸಲಾತಿ ನೀಡಲು ಕೂಡ ಈ ಸೊಸೈಟಿಯಿಂದ ಸಹಾಯವಾಗಲಿದೆ, ಇದರ ಜೊತೆಗೆ ನೌಕರರಿಗೆ ಕಾಲಕಾಲಕ್ಕೆ ವೇತನ ಮತ್ತಿತರ ಸೌಲಭ್ಯ ಸಮರ್ಪಕವಾಗಿ ದೊರಕುತ್ತಿಲ್ಲ ಎಂಬ ದೂರುಗಳಿಗೂ ಕೂಡ ಕಡಿವಾಣ ಹಾಕಬಹುದಾಗಿದೆ ಎಂದರು. ಈಗಾಗಲೇ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈ ನೌಕರರ ಸಂಬಳದ ಖಾತೆಯನ್ನು ಡಿಸಿಸಿ ಬ್ಯಾಂಕ್‌ಗಳಲ್ಲಿ ತೆರೆಯಲಾಗುವುದು. ಸಾಲ ಸೌಲಭ್ಯ ಒದಗಿಸಲು ಸಂಘದ ಸದಸ್ಯರ ನೊಂದಣಿ ಪ್ರಕ್ರಿಯೆಯನ್ನು ಸಹ ಆರಂಭಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕಾಧಿಕಾರಿ ಅನಿಲ್ ಬಾಲಚಂದ್ರ ಭಗತಿ ತಿಳಿಸಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆನಂದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಡಾ.ಜಿ.ಪಿ.ರೇಣುಪ್ರಾದ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಧಿಕಾರಿ ಪವಿತ್ರಾ, ಬಾಲ ಕಾರ್ಮಿಕ ಯೋಜನಾ ಸೊಸೈಟಿಯೋಜನಾನಿರ್ದೇಶಕಪಿ.ಸತೀಶ್ ಕುಮಾರ್‌ನಿರೀಕ್ಷಕರು ಉಪಸ್ಥಿತರಿದ್ದರು.

## ಬಿಜೆಪಿ ಜನಾಕ್ರೋಶಯಾತ್ರೆ ಚಿತ್ರದುರ್ಗಕ್ಕೆ 25ರಂದು ಆಗಮನ: ಜನಾಕ್ರೋಶ ಯಾತ್ರೆ ಯಶಸ್ವಿಗೊಳಿಸಲು ಮನವಿ

» **ಚಳ್ಳಕೆರೆ**

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದು ಎರಡು ವರ್ಷ ಆಗುತ್ತಾಬಂದಿದ್ದು,ಕೇವಲಗ್ಯಾರಂಟಿ ಯೋಜನೆಗಳ ಮೂಲಕ ಅಧಿಕಾರ ಪಡೆದ ಕಾಂಗ್ರೆಸ್ ಪೆಟ್ರೋಲ್, ಡಿಸೇಲ್ ಸೇರಿದಂತೆ ಸುಮಾರು 50ಕ್ಕೂ ಹೆಚ್ಚು ಅಗತ್ಯ ವಸ್ತುಗಳ ಬೆಲೆಯನ್ನು ಗಗನಕ್ಕೇರಿಸುವ ಮೂಲಕ ಶ್ರೀಸಾಮಾನ್ಯರ ಬದುಕನ್ನು ನರಕವನ್ನಾಗಿಸಿದೆ ಎಂದು ಬಿಜೆಪಿ ರೈತ ಮೋಚಾ ರಾಜ್ಯಕಾರ್ಯದರ್ಶಿ ಮಲ್ಲಿಕಾರ್ಜುನ ಆರೋಪಿಸಿದರು.



ಅವರು, ಮಂಗಳವಾರ ನಗರದ ಬಿಜೆಪಿ ಕಾರ್ಯಾಲಯದಲ್ಲಿ ಏ.25ರ ಬೆಳಗ್ಗೆ 10ಕ್ಕೆ ಚಿತ್ರದುರ್ಗಕ್ಕೆ ಆಗಮಿಸುವ ಬಿಜೆಪಿಯ ಜನಾಕ್ರೋಶ ಯಾತ್ರೆ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ ಪೂರ್ವಬಾವಿ ಸಭೆಯನ್ನು ಭಾರತಮಾತೆಯ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಈಗಾಗಲೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನ ಪರಿಷತ್ ವಿರೋಧಪಕ್ಷದ ನಾಯಕ ಛಲವಾದಿನಾರಾಯಣಸ್ವಾಮಿ, ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ್, ಬಿಜೆಪಿ ರಾಷ್ಟ್ರೀಯ ಮಾಜಿಕಾರ್ಯದರ್ಶಿ ಸಿ.ಟಿ.ರವಿ, ಸಂಸದ ಗೋವಿಂದಕಾರಜೋಳನೇತೃತ್ವದಲ್ಲಿ 2 ಹಂತವನ್ನು ಮುಗಿಸಿ 3ನೇಹಂತಕ್ಕೆ ಕಾಲಿಡುತ್ತಿದ್ದು, ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು. ಯುವಮುಖಂಡ ಕೆ.ಟಿ.ಕುಮಾರಸ್ವಾಮಿ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರವ್ಯಾಪ್ತಿಯ ಸುಮಾರು 245 ಬೂತ್‌ಗಳಲ್ಲಿ ಪ್ರತಿಬೂತ್‌ನಿಂದ ಕಾರ್ಯಕರ್ತರು ಜನಾಕ್ರೋಶಯಾತ್ರೆಯಲ್ಲಿ ಪಾಲ್ಗೊಳ್ಳಬೇಕು. ಕಡೆಪಕ್ಷ ಎರಡು ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಚಿತ್ರದುರ್ಗದ ಜನಾಕ್ರೋಶಯಾತ್ರೆಯಲ್ಲಿ ಪಾಲ್ಗೊಳ್ಳುವರು. ಈ ನಿಟ್ಟಿನಲ್ಲಿ ಪಕ್ಷದ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು, ಸಾರ್ವಜನಿಕರು, ಅಭಿಮಾನಿಗಳು ಹಾಗೂ ಪಕ್ಷ ಬಗ್ಗೆ ಒಲವಿರುವ ಎಲ್ಲರನ್ನೂ ಚಿತ್ರದುರ್ಗದಲ್ಲಿ ನಡೆಯುವ ಸಭೆಗೆ ಕರೆತರುವಂತೆ ಮನವಿ ಮಾಡಿದರು. ಸಭೆಯ ಅಧ್ಯಕ್ಷತೆಯನ್ನು ಬಿಜೆಪಿ ಮಂಡಲಾಧ್ಯಕ್ಷ ಬಿ.ಎಂ.ಸುರೇಶ್‌ವಹಿಸಿ ಮಾತನಾಡಿ, ಭಾರತೀಯ ಜನತಾಪಕ್ಷ ಜನರ ಪರವಾಗಿ ಕಳೆದ ಹಲವಾರು ದಶಕಗಳಿಂದ ಹೋರಾಟ ನಡೆಸುತ್ತಾ ಬಂದಿದೆ. ಇತ್ತೀಚಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷದ ದುರಾಡಳಿತ ಎಲ್ಲರಿಗೂ ಬೇಸರತರಿಸಿ ಈ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರು ಮನೆ, ಮನೆಗೂ ತೆರಳಿ ಕಾಂಗ್ರೆಸ್ ವೈಫಲ್ಯವನ್ನು ವಿವರಿಸಿ ಬಿಜೆಪಿಗೆ ಮತುಯಾಚನೆ ಮಾಡಬೇಕೆಂದು ವಿನಂತಿಸಿದರು. ಸಭೆಯಲ್ಲಿ ಬಿಜೆಪಿ ಜಿಲ್ಲಾ ಎಸ್ಸಿಮೋರ್ಚಾ ಅಧ್ಯಕ್ಷ ಕರೀಕೆರೆತಿಪ್ಪೇಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜಿಲ್ಲಾ ಪ್ರಕೋಷ್ಠಗಳ ಮುಖಂಡ ಪ್ರಸಾದ್, ಮಾಜಿ ಮಂಡಲಾಧ್ಯಕ್ಷ ಸೋಮಶೇಖಮಂಡಿಮಠ, ಮಾಜಿ ಜಿಲ್ಲಾಕಾರ್ಯದರ್ಶಿ ಜಯಪಾಲಯ್ಯ, ಶಿವಪುತ್ರಪ್ಪ, ಜಿ.ಕೆ.ಈರಣ್ಣ, ದೇವರಾಜರೆಡ್ಡಿ, ಟಿ.ತಿಮ್ಮಪ್ಪ, ದಿನೇಶ್‌ರೆಡ್ಡಿ, ಬಸವರಾಜು, ದೊರೆನಾಗರಾಜು, ಶ್ರೀನಿವಾಸ್ ಭಾಗವಹಿಸಿದ್ದರು.

## ಜನಿವಾರ ತೆಗೆಸಿರುವುದನ್ನು ವಿರೋಧಿಸಿ ಚಿತ್ರದುರ್ಗ ಬ್ರಾಹ್ಮಣ ಸಂಘ ಅಪರ ಜಿಲ್ಲಾಧಿಕಾರಿಗೆ ಮನವಿ



» **ಚಿತ್ರದುರ್ಗ**

ರಾಜ್ಯದಲ್ಲಿ ಎರಡು ದಿನಗಳ ಕಾಲ ನಡೆದ ಸಿ.ಇ.ಟಿ. ಪರೀಕ್ಷೆಯಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರ ತೆಗೆಸಿ ಅವಮಾನ ಮಾಡಿರುವುದನ್ನು ಖಂಡಿಸಿ ಚಿತ್ರದುರ್ಗ ಬ್ರಾಹ್ಮಣ ಸಂಘದ ವತಿಯಿಂದ ಅಪರ ಜಿಲ್ಲಾಧಿಕಾರಿಗೆ ಸೋಮವಾರ ಮನವಿ ಸಲ್ಲಿಸಲಾಯಿತು. ಜಾತಿ ಗಣತಿಯಲ್ಲಿಯೂ ಬ್ರಾಹ್ಮಣರನ್ನು ನಿರ್ಲಕ್ಷಿಸಿರುವುದರಿಂದ ಹೊಸದಾಗಿ ಗಣತಿ ಆರಂಭಿಸುವಂತೆ ಒತ್ತಾಯಿಸಿದ ಚಿತ್ರದುರ್ಗ ಬ್ರಾಹ್ಮಣ ಸಂಘ ಜಿಲ್ಲಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ರವಾನಿಸಿತು. ಚಿತ್ರದುರ್ಗ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಪಿ.ಎಸ್.ಮಂಜುನಾಥ್, ಕಾರ್ಯದರ್ಶಿ ಡಿ.ಜಿ.ಪ್ರಾಣೇಶ್‌ರಾವ್, ಜಿ.ಎ.ದೀಪಾನಂದ, ನಿರ್ದೇಶಕರುಗಳಾದ ಕೆ.ಹೆಚ್.ಶಂಕರ್ ಡಿ.ಎಸ್.ರಾಘವೇಂದ್ರ, ಕೆ.ಮೋಹನ್‌ಭಟ್, ಮಾಜಿ ಅಧ್ಯಕ್ಷ ಟಿ.ಕೆ.ಚಂದ್ರಶೇಖರ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### 7 ಸಂಚಾರಿ ಪಶು ಚಿಕಿತ್ಸಾ ಘಟಕ

» **ದಾವಣಗೆರೆ**

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ವತಿಯಿಂದ ಜಿಲ್ಲೆಯಲ್ಲಿ ತುರ್ತು ಸಂದರ್ಭಗಳಲ್ಲಿ ಜಾನುವಾರುಗಳ ಚಿಕಿತ್ಸೆಗಾಗಿ 7 ಸಂಚಾರಿ ಪಶು ಚಿಕಿತ್ಸಾ ಘಟಕಗಳು ಕಾರ್ಯ ನಿರ್ವಹಿಸಲಿದೆ.

## ಪ್ರಮುಖ ಸುದ್ದಿ

### ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕ ಟಿ.ರಾಘವೇಂದ್ರ ಸೂಚನೆ

# ಅಪೌಷ್ಠಿಕ ಮಕ್ಕಳ ಮಾಹಿತಿ ಪೋಷಣ್ ಟ್ರ್ಯಾಕರ್‌ನಲ್ಲಿ ನಮೂದಿಸಿ

» **ಚಿತ್ರದುರ್ಗ**

ಪೋಷಣ್ ಅಭಿಯಾನದ ಮುಖ್ಯ ಉದ್ದೇಶ ಅಪೌಷ್ಠಿಕ ಮಕ್ಕಳ ಸಂಖ್ಯೆ ಕಡಿಮೆ ಮಾಡುವುದಾಗಿದೆ. ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಮೇಲ್ವಿಚಾರಕರು ಪೋಷಣ್ ತಂತ್ರಾಂಶದಲ್ಲಿ ನಿಖರವಾಗಿ ಮಕ್ಕಳ ತೂಕ ಮತ್ತು ಎತ್ತರವನ್ನು ಅಳವಡಿಸುವುದರ ಮೂಲಕ ತೀವ್ರ ಅಪೌಷ್ಟಿಕ ಮಕ್ಕಳ ಮಾಹಿತಿಯನ್ನು ಪೋಷಣ್ ಟ್ರ್ಯಾಕರ್‌ನಲ್ಲಿ ನಮೂದಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕ ಟಿ.ರಾಘವೇಂದ್ರ ಸೂಚಿಸಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಸೋಮವಾರ ನಡೆದ ಪೋಷಣ್ ಪಕ್ವಾಡ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಅಪೌಷ್ಟಿಕ ಮಕ್ಕಳ ಸಂಖ್ಯೆಯನ್ನು ಕಡಿಮೆ ಮಾಡುವುದು, ಕುಂಠಿತ ಬೆಳವಣಿಗೆ ತಡೆಗಟ್ಟುವುದು, ಗರ್ಭಿಣಿ ಬಾಣಂತಿಯರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ




ಹಿನ್ನಲೆಯಲ್ಲಿ ಪೋಷಣ್ ಅಭಿಯಾನ ಆರಂಭಿಸಲಾಗಿದೆ. ಪೋಷಣ್ ಅಭಿಯಾನ ಯೋಜನೆಯಡಿ ನೀಡಲಾಗಿರುವ ಪೋಷಣ್ ಟ್ರ್ಯಾಕರ್ ತಂತ್ರಾಂಶದ ಬಗ್ಗೆ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮಹಿಳಾ ಮೇಲ್ವಿಚಾರಕಿಯರು ತಿಳಿದುಕೊಂಡು ಫಲಾನುಭವಿಗಳ ಮಾಹಿತಿಯನ್ನು ಅಳವಡಿಸಬೇಕು. ಮಹಿಳಾ ಅಂಗವನಾಡಿ ಕಾರ್ಯಕರ್ತೆಯರು ಹಾಗೂ ಮೇಲ್ವಿಚಾರಕರಿಗೆ ತಾಲ್ಲೂಕು ಮಟ್ಟದಲ್ಲಿ ಶಿಬಿರಗಳನ್ನು ಆಯೋಜಿಸುವಂತೆ ಉಪನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಸೀಮಂತ ಹಾಗೂ ಮಕ್ಕಳಿಗೆ ಅನ್ನಪ್ರಾಸಾನ್ನ ಟಿ.ರಾಘವೇಂದ್ರ ನೆರವೇರಿಸಿದರು. ಸುಕನ್ಯ ಸಮೃದ್ಧಿ ಯೋಜನೆಯ ಫಲಾನುಭವಿಗಳಿಗೆ ಪಾಸ್‌ಬುಕ್ ಅನ್ನು ವಿತರಿಸಿದರು. ಪೋಷಣ್ ಪಕ್ವಾಡ ಕಾರ್ಯಕ್ರಮದ ಅಂಗವಾಗಿ ಪೋಷಣ್ ಅಭಿಯಾನ್ ಯೋಜನೆಯ ಕ್ಯಾಲೆಂಡರ್ ಹಾಗೂ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ವಿಕಲಚೇತನರಿಗೆ ಸಾಧನ ಸಲಕರಣೆಗಳನ್ನು ವಿತರಿಸಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಕಾರ್ಯಕ್ರಮದಲ್ಲಿ ಸ್ವಾಗತ ಕೋರಿ ಪ್ರಸ್ತಾವಿಕ ನುಡಿಗಳನ್ನು ಆಡಿದರು. ಜಿಲ್ಲಾ ನಿರೂಪಣಾಧಿಕಾರಿ ವಿಜಯ ಕುಮಾರ್ ಎಸ್, ಅಧಿಕಾರಿ ಪವಿತ್ರ ಎನ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸಿ, ಜಿಲ್ಲಾ ಅಂಗವಿಕಲ ಹಾಗೂ ಹಿರಿಯ ನಾಗರೀಕರ ಕಲ್ಯಾಣಾಧಿಕಾರಿ ವೈಶಾಲಿ ಜೆ, ಜಿಲ್ಲೆಯ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮೇಲ್ವಿಚಾರಕಿಯರು, ಪೋಷಣ್ ಅಭಿಯಾನ್ ಯೋಜನೆಯ ಸಂಯೋಜಕರುಗಳು ಹಾಗೂ ಫಲಾನುಭವಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ತೋಟಗಾರಿಕೆ ಇಲಾಖೆ ವ್ಯಾಪ್ತಿಯ ಹಿರೇಗುಂಟನೂರು ಹೋಬಳಿಯ ಐಯ್ಯನಹಳ್ಳಿ ಗ್ರಾಮದಲ್ಲಿನ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದ್ದ ಕೊನೆಯ ದಿನವನ್ನು ಏಪ್ರಿಲ್ 28 ವರೆಗೆ ವಿಸ್ತರಿಸಲಾಗಿದೆ. ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಐಯ್ಯನಹಳ್ಳಿ ಗ್ರಾಮದಲ್ಲಿನ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿನಲ್ಲಿ 2025ರ ಮೇ 02 ರಿಂದ 2026ರ ಫೆ.28 ರ ಅವಧಿಯವರೆಗೆ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಅರ್ಜಿಗಳನ್ನು ಮಾರ್ಚ್ 01 ರಿಂದ 31 ರವರೆಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯಲ್ಲಿ ಅಥವಾ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in ನಲ್ಲಿ ಅಥವಾ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಆಯ್ಕೆಯಾದ ಶಿಬಿರಾರ್ಥಿಗಳಿಗೆ ಜಿಲ್ಲೆಯ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ವಸತಿ ಸಹಿತ ತರಬೇತಿ ನೀಡಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಆಯ್ಕೆಗೊಂಡಲ್ಲಿ ಈ ಅಭ್ಯರ್ಥಿಗಳಿಗೆ ಉಚಿತವಾಗಿ ಕಲಿಕೆಯ ಎಲ್ಲಾ ತರಹದ ಅವಕಾಶಗಳನ್ನು ಕಲ್ಪಿಸಲಾಗುವುದು. ಆದರೆ ವಸತಿ ನಿಲಯದಲ್ಲಿ ವಾಸ್ತವ್ಯದ ವ್ಯವಸ್ಥೆ ಕಡ್ಡಾಯ ಇರುವುದಿಲ್ಲ ಹಾಗೂ ಶಿಷ್ಯವೇತನಕ್ಕೆ ಅವಕಾಶವಿರುವುದಿಲ್ಲ. ತರಬೇತಿಗೆ ಒಟ್ಟು 15 ಅಭ್ಯರ್ಥಿಗಳಿಗೆ ಅವಕಾಶವಿದ್ದು, ಮೆರಿಟ್ ಆಧಾರದ ಮೇಲೆ ಸರ್ಕಾರದ ಮೀಸಲಾತಿ ನಿಯಮಗಳನುಸಾರ ಆಯ್ಕೆ ಮಾಡಲಾಗುತ್ತದೆ.

ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣವಾಗಿರಬೇಕು. ತರಬೇತಿ ಬಯಸುವ ಅಭ್ಯರ್ಥಿಯ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು ಹಾಗೂ ಸ್ವಂತ ಜಮೀನನ್ನು ಸಾಗುವಳಿ ಮಾಡುತ್ತಿರಬೇಕು. ಮಾಜಿ ಸೈನಿಕರ ತರಬೇತಿಯನ್ನು ಪಡೆಯಲು ಇಚ್ಚಿಸಿದ್ದಲ್ಲಿ ಡಿಸ್‌ಜಾರ್ಜ್ ಬುಕ್, ಪರ್ಸನಲ್ ಪೆನ್ಶನ್ ಆರ್ಡರ್ ಕಾಪಿ, ಎಕ್ಸ್ ಸರ್ವಿಸ್ ಮ್ಯಾನ್ ಐಡಿ ಕಾರ್ಡ್ ಕಾಪಿ, ಇತ್ಯಾದಿಗಳನ್ನ ಸಲ್ಲಿಸಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಹಾಗೂ ಅಂಗವಿಕಲದವರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ ವಯಸ್ಸಿನವರಾಗಿರಬೇಕು. ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 30 ವರ್ಷ, ಮಾಜಿ ಸೈನಿಕರಿಗೆ 33 ರಿಂದ 65 ವರ್ಷ ವಯಸ್ಸಿನವರಾಗಿರಬೇಕು. ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ ರೂ.1,750/–ಗಳ ಮಾಸಿಕ ಶಿಷ್ಯವೇತನ ನೀಡಲಾಗುವುದು. ಸಾಮ್ಯಾನ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.30, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಅಂಗವಿಕಲ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು ಅರ್ಜಿ ಶುಲ್ಕ ರೂ.15 ಮೌಲ್ಯದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ (ಆಆ) ಮೂಲಕ Deputy Director of Horticulture (ZP) Chitradurga ಹೆಸರಿನಲ್ಲಿ ಪಡೆದು, ಅಗತ್ಯ ದಾಖಲೆಗಳೊಂದಿಗೆ ತೋಟಗಾರಿಕೆ ಉಪನಿರ್ದೇಶಕರು, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಚಿತ್ರದುರ್ಗ ಕಚೇರಿಗೆ ಏಪ್ರಿಲ್ 01ರ ಸಂಜೆ 5.30 ರೊಳಗೆ ಅರ್ಜಿ ಸಲ್ಲಿಸಬೇಕು. ಏಪ್ರಿಲ್ 08 ರಂದು ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ತೋಟಗಾರಿಗೆ ಉಪ ನಿರ್ದೇಶಕರರ ಕಚೇರಿಯಲ್ಲಿ ಸಂದರ್ಶವನ್ನು ನೆಡೆಸಲಾಗುವುದು.ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಚಿತ್ರದುರ್ಗ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 08194–230895, 9980991048 ಅನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಏ.23ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಬೆಸ್ಕಾಂ ಚಿತ್ರದುರ್ಗ ಗ್ರಾಮೀಣ ಉಪ ವಿಭಾಗ ವ್ಯಾಪ್ತಿಯಲ್ಲಿ ಬರುವ ಭರಮಸಾಗರ ವಿದ್ಯುತ್ ವಿತರಣಾ ಕೇಂದ್ರದಲ್ಲಿರುವ 12.5 ಎಂ.ವಿ.ಎ ಪರಿವರ್ತಕದ ದುರಸ್ಥಿ ಕಾಮಗಾರಿ ಹಮ್ಮಿಕೊಂಡಿರುವುದರಿಂದ, ಇದೇ ಏ.23ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಭರಮಸಾಗರ ವಿದ್ಯುತ್ ವಿತರಣಾ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಎನ್.ಜೆ.ವೈ ಮತ್ತು ಐ.ಪಿ. ಮಾರ್ಗಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

**ವಿದ್ಯುತ್ ಅಡಚಣೆ ಯಾಗುವ ಪ್ರದೇಶಗಳು:** 66/11 ಕೆವಿ ಭರಮಸಾಗರ ವಿವಿ ಕೇಂದ್ರದಿಂದ ಸರಬರಾಜಾಗುವ 11ಕೆವಿ ಮಾರ್ಗಗಳಲ್ಲಿ ವಿದ್ಯುತ್ ಅಡಚಣೆಯಾಗುತ್ತದೆ. ಎಫ್–4 ಕೊಳಹಾಳ್ ಎನ್.ಜೆ.ವೈ ಮತ್ತು ಎಫ್–10 ಅಡವಿಗೊಲ್ಲರಹಳ್ಳಿ ಎನ್.ಜೆ.ವೈ ಮಾರ್ಗಗಳು, ಎಫ್–1 ಹೆಗ್ಗೆರೆ, ಎಫ್–2 ಎಮ್ಮೆಹಟ್ಟಿ, ಎಫ್–3 ನಲ್ಲಿಕಟ್ಟೆ ಮತ್ತು ಎಫ್–9 ಬಹದ್ದೂರಗಟ್ಟ ಐ.ಪಿ. ಮಾರ್ಗಗಳು. ವಿದ್ಯುತ್ ವ್ಯತ್ಯಯ ಆಗುವ ಪ್ರದೇಶಗಳು: 66/11 ಕೆವಿ ಭರಮಸಾಗರ ವ್ಯಾಪ್ತಿಯ ಕೊಳಹಾಳ್, ಎಮ್ಮೆಹಟ್ಟಿ, ಚಿಕ್ಕಬೆನ್ನೂರು, ಬಸವನಶಿವನಕೆರೆ, ಬೇಡರಶಿವನಕೆರೆ, ಹಂಪನೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗ್ರಾಹಕರು ಸಹಕರಿಸಬೇಕು ಎಂದು ಚಿತ್ರದುರ್ಗ ಬೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

ಏ. 28 ರಂದು ಚಿತ್ರದುರ್ಗದಲ್ಲಿ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆ

# ಸಮಗ್ರ ಅಭಿವೃದ್ಧಿ ಸೂಚ್ಯಂಕ ನಿರ್ಧರಿಸುವ ಅಂಶಗಳಿಗೆ ಒತ್ತು ನೀಡಲು ಜಿಲ್ಲಾಧಿಕಾರಿ ವೆಂಕಟೇಶ್ ಸೂಚನೆ

» ಚಿತ್ರದುರ್ಗ

ರಾಜ್ಯ ಸರ್ಕಾರವು ಆರ್ಥಿಕ ತಜ್ಞ ಪ್ರೊ. ಎಂ. ಗೋವಿಂದ ರಾವ್ ಅವರ ಅಧ್ಯಕ್ಷತೆಯಲ್ಲಿ ರಚಿಸಿರುವ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯು ಏ. 28 ರಂದು ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಬೆಂಗಳೂರು ವಿಭಾಗ ಮಟ್ಟದ ಜಿಲ್ಲೆಗಳ ಜನಪ್ರತಿನಿಧಿಗಳು, ಆರ್ಥಿಕ ಮತ್ತು ಶೈಕ್ಷಣಿಕ ತಜ್ಞರು, ಕೈಗಾರಿಕಾ ಕ್ಷೇತ್ರದ ತಜ್ಞರೊಂದಿಗೆ ಸಂವಾದ ಸಭೆಯನ್ನು ನಡೆಸಲಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ತಾಲ್ಲೂಕುವಾರು ಸಮಗ್ರ ಅಭಿವೃದ್ಧಿ ಸೂಚ್ಯಂಕವನ್ನು ನಿರ್ಧರಿಸುವ ಅಂಶಗಳಿಗೆ ಒತ್ತು ನೀಡಿ, ವರದಿ ಸಿದ್ಧಪಡಿಸಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಸಭೆಯ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಹಿಂದೆ ಡಾ. ಡಿ.ಎಂ. ನಂಜುಂಡಪ್ಪ ಅವರು ಸಲ್ಲಿಸಿದ್ದ ವರದಿಯ ಅನುಷ್ಠಾನದಿಂದ ಅಭಿವೃದ್ಧಿ ಹೊಂದಿರುವ ಹಾಗೂ ಹೊಂದದೇ ಇರುವ ತಾಲ್ಲೂಕುಗಳನ್ನು ಗುರುತಿಸಿ, ಹೊಸದಾಗಿ ಸೂಚ್ಯಂಕವನ್ನು ಕಂಡುಹಿಡಿದು, ಪ್ರಾದೇಶಿಕ ಅಸಮತೋಲನ ನಿವಾರಣೆ ಮಾಡುವ ಸಲುವಾಗಿ ರಾಜ್ಯ ಸರ್ಕಾರ ಆರ್ಥಿಕ ತಜ್ಞ ಪ್ರೊ. ಎಂ. ಗೋವಿಂದ ರಾವ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದೆ. ಬೆಂಗಳೂರು ವಿಭಾಗದ ಜಿಲ್ಲೆಗಳಾದ ಚಿತ್ರದುರ್ಗ, ತುಮಕೂರು,ದಾವಣಗೆರೆಮತ್ತುಶಿವಮೊಗ್ಗ ಜಿಲ್ಲೆಗಳನ್ನು ಒಳಗೊಂಡಂತೆ ಸಮಿತಿಯು ಏ. 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಂವಾದ ಸಭೆಯನ್ನು ನಡೆಸಲಿದ್ದು, ಇದರಲ್ಲಿ ಈ ಎಲ್ಲ ಜಿಲ್ಲೆಗಳ ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಕ್ಷೇತ್ರಗಳ ತಜ್ಞರು ಭಾಗವಹಿಸಲಿದ್ದಾರೆ.

ಈ ಎಲ್ಲ ನಾಲ್ಕೂ ಜಿಲ್ಲೆಗಳನ್ನು ಹೋಲಿಸಿದಾಗ ಚಿತ್ರದುರ್ಗ ಜಿಲ್ಲೆಯು ಅತ್ಯಂತ ಹಿಂದುಳಿದ ಜಿಲ್ಲೆಯಾಗಿದ್ದು, ಈ ಹಿಂದುಳಿದಿರುವಿಕೆಯನ್ನು ನಿವಾರಿಸಲು ಅಭಿವೃದ್ಧಿ ಅಗತ್ಯವಾಗಿರುತ್ತದೆ. ಈ ಕುರಿತಂತೆ ನಿಖರವಾಗಿ ಅಂಕಿ–ಅಂಶಗಳೊಂದಿಗೆವರದಿಸಲ್ಲಿಸಬೇಕಿರುತ್ತದೆ.

ಕೃಷಿಗೆ ಸಂಬಂಧಿಸಿದಂತೆ ಬಿತ್ತನೆ ಪ್ರದೇಶ, ಆಹಾರ ಧಾನ್ಯ ಮತ್ತು ವಾಣಿಜ್ಯ ಬೆಳೆ ಪ್ರದೇಶ ಪ್ರಮಾಣ, ನೀರಾವರಿ ಮತ್ತು ಮಳೆ ಆಶ್ರಿತ ಪ್ರದೇಶ ಪ್ರಮಾಣ. ರಸಗೊಬ್ಬರದ ಬಳಕೆ ಪ್ರಮಾಣ, ಕೃಷಿ ಯಂತ್ರೋಪಕರಣಗಳ ಬಳಕೆ ಪ್ರಮಾಣ, ಕೃಷಿಗೆ ತಲಾ ಬ್ಯಾಂಕ್ ಸಾಲ ಪ್ರಮಾಣ ವಿವರಗಳನ್ನು ಒದಗಿಸಬೇಕು. ಕೈಗಾರಿಕೆ ಮತ್ತು ಹಣಕಾಸು ಕ್ಷೇತ್ರ ಸಂಬಂಧಿಸಿದಂತೆ ಪ್ರತಿ ಲಕ್ಷ ಜನಸಂಖ್ಯೆಗೆ ಕೈಗಾರಿಕೆ ಘಟಕಗಳ ಸಂಖ್ಯೆ, ಕಾರ್ಮಿಕರ ಸಂಖ್ಯೆ, ಬ್ಯಾಂಕುಗಳಿಂದ ಅಭಿವೃದ್ಧಿ ಸಾಲ, ಪ್ರತಿ ಲಕ್ಷ ಜನಸಂಖ್ಯೆಗೆ ವ್ಯಾಪಾರ, ಹೋಟೆಲ್ ಮತ್ತು ಸಾರಿಗೆಯಲ್ಲಿ ತೊಡಗಿರುವ ಉದ್ಯಮಗಳು. ಜನಸಂಖ್ಯೆಗೆ ಅನುಗುಣವಾಗಿ ಅಂಚೆಕಚೇರಿಗಳು, ರಸ್ತೆಗಳು, ಸಹಕಾರ ಸಂಘಗಳು, ಕೃಷಿ ಉತ್ಪನ್ನ ಮಾರುಕಟ್ಟೆಗಳ ವಿವರ, ಮೂಲ ಸೌಕರ್ಯಗಳ ಸೂಚ್ಯಂಕವನ್ನು ನಿರ್ಧರಿಸುವ ಸಾಕ್ಷರತಾ ಪ್ರಮಾಣ, ಆಸ್ಪತ್ರೆಗಳು ಮತ್ತು ವೈದ್ಯರ ಪ್ರಮಾಣ, ವಾಹನಗಳ ಸಂಖ್ಯೆ, ವಿದ್ಯಾರ್ಥಿ–ಶಿಕ್ಷಕರ ಅನುಪಾತ, ಪ್ರಾಥಮಿಕ ಶಾಲೆಗಳು, ಪ್ರೌಢ ಶಿಕ್ಷಣ ಮತ್ತು ಕಾಲೇಜುಗಳು, ಉನ್ನತ ಶಿಕ್ಷಣ ಸಂಸ್ಥೆಗಳು ಸರ್ಕಾರಿ ಮತ್ತು ಖಾಸಗಿ ಎರಡೂ ವಿವರಗಳನ್ನು ಒದಗಿಸಬೇಕು. ಲಿಂಗಾನುಪಾತ, ನಗರ ಮತ್ತು ಗ್ರಾಮೀಣ ಭಾಗದಲ್ಲಿನ ಜನಸಂಖ್ಯೆ ಪ್ರಮಾಣ ಸೇರಿದಂತೆ ಸಮಗ್ರ ಅಭಿವೃದ್ಧಿ ಸೂಚ್ಯಂಕ ನಿಗದಿಪಡಿಸುವ ಅಂಶಗಳನ್ನು ನಿಖರವಾಗಿ ಸಂಗ್ರಹಿಸಿ, ವರದಿ ಸಿದ್ಧಪಡಿಸಬೇಕು ಎಂದು ಸೂಚನೆ ನೀಡಿದರು.

ಸಂವಾದ ಸಭೆಗೆ ಜಿಲ್ಲೆಯ ಆರ್ಥಿಕ ಮತ್ತು ಶೈಕ್ಷಣಿಕ ತಜ್ಞರು, ಕೈಗಾರಿಕಾ ತಜ್ಞರನ್ನು ಆಹ್ವಾನಿಸಿ, ಸಭೆಯಲ್ಲಿ ಪಾಲ್ಗೊವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಬೆಂಗಳೂರು ವಿಭಾಗ ಮಟ್ಟದ ಜಿಲ್ಲೆಗಳಿಂದ ಆಗಮಿಸುವ ಲೋಕಸಭಾ ಸದಸ್ಯರು, ವಿಧಾನಸಭೆ ಮತ್ತು ವಿಧಾನಪರಿಷತ್ ಸದಸ್ಯರ ವಿವರವನ್ನು ಸಂಗ್ರಹಿಸಿ, ಸೂಕ್ತ ಶಿಷ್ಟಾಚಾರ ಕಲ್ಪಿಸುವುದು, ವಾಸ್ತವ್ಯಕ್ಕೆ ವ್ಯವಸ್ಥೆ, ಊಟೋಪಹಾರದ ವ್ಯವಸ್ಥೆ ಅಲ್ಲದೆ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಲು ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಜವಾಬ್ದಾರಿಯುತವಾಗಿ ತಮ್ಮ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಇದೇ ಸಂದರ್ಭದಲ್ಲಿ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಆನಂದ್, ಜಿ.ಪಂ. ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಡಿಹೆಚ್‌ಒ ಡಾ. ರೇಣುಪ್ರಸಾದ್, ಡಿಡಿಪಿಐ ಮಂಜುನಾಥ್, ಡಿಡಿಪಿಯು ಪುಟ್ಟಸ್ವಾಮಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ರಾಮನಾಮಸ್ಮರಣೆಯಿಂದ ಬದುಕಿನಲ್ಲಿ ನವೋತ್ಸಾಹ: ಅನಂತರಾಮ್‌ಗೌತಮ್

» ಚಳ್ಳಕೆರೆ

ಮರ್ಯಾದ ಪುರುಷೋತ್ತಮ ಪ್ರಭುಶ್ರೀರಾಮಚಂದ್ರನ ಆದರ್ಶಗಳು ಪ್ರತಿಯೊಬ್ಬ ವ್ಯಕ್ತಿಯ ಉತ್ತಮ ಬದುಕಿಗೆ ಪ್ರೇರಣೆಯಾಗಿವೆ. ರಾಮನ ಆದರ್ಶಗಳ ಬಗ್ಗೆ ಎಲ್ಲೆಡೆ ಅಪಾರವಾದ ಗೌರವವಿದೆ. ರಾಮ ಸಂಸ್ಕೃತಿ ಮತ್ತು ಸಂಸ್ಕಾರದ ನಂದಾದೀಪವೆಂದು ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್‌ಗೌತಮ್ ತಿಳಿಸಿದರು.



ಅವರು, ಮಂಗಳವಾರ ಗಾಯಿತ್ರಿಮಹಿಳಾ ಸಾಂಸ್ಕೃತಿಕ ಭವನದಲ್ಲಿ ವಿಪ್ರಗಾಯಿತ್ರಿ ಮಹಿಳಾ ಸಂಘ ಏರ್ಪಡಿಸಿದ್ದ ರಾಮೋತ್ಸವ ಕಾರ್ಯಕ್ರಮದಲ್ಲಿಪಾಲ್ಗೊಂಡುಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಸಮಾಜದ ಎಲ್ಲಾ ವರ್ಗದ ಜನರು ಶ್ರೀರಾಮನ ಭಕ್ತರಾಗಿದ್ದಾರೆ, ಶ್ರೀರಾಮನ ಹೆಸರಿನಲ್ಲಿ ಅಘಾದವಾದ ಶಕ್ತಿ ಇದೆ. ವಿಶೇಷವಾಗಿ ಕಳೆದ ವರ್ಷ ಶ್ರೀರಾಮಜನಿಸಿದ ಅಯೋಧ್ಯೆಯಲ್ಲಿ ಭವ್ಯವಾದ ಶ್ರೀರಾಮಮಂದಿರ ನಿರ್ಮಾಣ ಮಾಡಲಾಗಿದೆ. ಅಯೋಧ್ಯೆಯ ರಾಮಮಂದಿರವನ್ನು ವೀಕ್ಷಿಸಲು ವಿದೇಶದಿಂದಲೂ ಸಹ ಭಕ್ತರು ಆಗಮಿಸುತ್ತಿರುವುದು ವಿಶೇಷ ಎಂದರು.

ಶ್ರೀರಾಮನವಮಿಪ್ರಯುಕ್ತಪೂಜಾಕಾರ್ಯಗಳ ನಂತರ ಭಕ್ತರಿಗೆ ತೀರ್ಥಪ್ರಸಾದವನ್ನು ವಿತರಣೆ ಮಾಡಲಾಯಿತು. ಪೂಜಾ ಕಾರ್ಯದಲ್ಲಿ ಮಹಿಳಾ ಘಟಕದ ಅಧ್ಯಕ್ಷೆ ಸೀತಾಲಕ್ಷ್ಮಿವಾದಿರಾಜ್, ಸುಮತಿವಾಸುದೇವರಾವ್, ಮಧುಮತಿ, ನಾಗಮಣಿಜಯರಾಮ್, ಶೈಲಜಾಗೋಪಿನಾಥ, ಎಂ.ಸತ್ಯನಾರಾಯಣರಾವ್, ಜೆ.ಎಸ್.ಶ್ರೀನಾಥ, ಸುಬ್ರಮಣ್ಯ, ಜಿ.ಕೃಷ್ಣಮೂರ್ತಿ, ಸಿ.ಎಸ್. ಗೋಪಿನಾಥ, ಪಂಕಜಗೌತಮ್, ದೀಪ್ತಿ, ನವ್ಯ, ಗೀತಾ, ಭಾರ್ಗವಿಸತ್ಯನಾರಾಯಣ, ಗೀತಾಭಟ್, ತ್ರಿವೇಣಿ ಮುಂತಾದವರು ಉಪಸ್ಥಿತರಿದ್ದರು.



**ಹೊಸದುರ್ಗ ಪಟ್ಟಣದ ಗ್ರಾಮ ದೇವತೆಯಾದ ಶ್ರೀ ದುರ್ಗಾಂಬಿಕಾ ದೇವಿಯವರ ರಥೋತ್ಸವವು ಮಂಗಳವಾರ ಅತ್ಯಂತ ವೈಭವಯುತವಾಗಿ ಜರುಗಿತು.**

## ಅಂಬೇಡ್ಕರ್ ತತ್ವಾದರ್ಶಗಳು ಸರ್ವಕಾಲಕ್ಕೂ ಸ್ಪೂರ್ತಿದಾಯಕ



» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಶೋಷಣೆ ಮತ್ತು ಅವಮಾನಕ್ಕೀಡಾದ ದಲಿತ ಸಮೂಹಕ್ಕೆ ಸಂವಿಧಾನವನ್ನು ರಚಿಸಿ ಸಮಾತನತೆಯ ಗೌರವವನ್ನು ಕೊಡಿಸಿದ ಕೀರ್ತಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರದ್ದು. ಅಂಬೇಡ್ಕರ್‌ರವರ ತತ್ವಾದರ್ಶಗಳು ಎಲ್ಲರಿಗೂ ಸ್ಪೂರ್ತಿ ಎಂದು ದೊಡ್ಡಚೆಲ್ಲೂರು ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷ ಎಲ್.ಸುರೇಶ್ ತಿಳಿಸಿದರು. ಅವರು, ಮಂಗಳವಾರ ದೊಡ್ಡಬೀರನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಭಾವಚಿತ್ರಕ್ಕೆ ಪುಷ್ಪನಮನಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇಂದು ರಾಜ್ಯದಲ್ಲಿ ಲಕ್ಷಾಂತರ ದಲಿತರೂ ಸೇರಿದಂತೆ ಶೋಷಿತ ಸಮುದಾಯಕ್ಕೆ ಸರ್ಕಾರದ ಸೌಲಭ್ಯಗಳು ಹಾಗೂ ಉದ್ಯೋಗವಾಶಕಾಶಗಳು ದೊರೆಯುತ್ತಿವೆಯಾದರೆ ಅದಕ್ಕೆ ಅಂಬೇಡ್ಕರ್ ಸಂವಿಧಾನವೇ ಕಾರಣ, ನಾವೆಲ್ಲರೂಸದಾಕಾಲಅವರತತ್ವಾದರ್ಶಗಳಮುಂದಾಗೋಣವೆಂದರು. ಕಾರ್ಯಕ್ರಮದಲ್ಲಿ ಚನ್ನಮ್ಮನಾಗತಿಹಳ್ಳಿ ಗ್ರಾಮಪಂಚಾಯಿತಿ ಮಾಜಿ ಅಧ್ಯಕ್ಷ ಬಿ.ಆನಂದಕುಮಾರ್, ಗ್ಯಾರಂಟಿ ಸಮಿತಿ ಸದಸ್ಯ ಅನಿಲ್‌ಕುಮಾರ್, ಪಂಚಾಯಿತಿ ಸದಸ್ಯೆ ಸುಮತಿಮ್ಮರಾಜು, ಈರಣ್ಣ, ತಿಪ್ಪೇಸ್ವಾಮಿ, ಕಾವ್ಯಆನಂದ, ಹನುಮಂತರಾಯ, ಕೆ.ತಿಪ್ಪೇಸ್ವಾಮಿ, ಜಯಣ್ಣ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ಸಿಮ್ಸ್ ನಿರ್ದೇಶಕರ ಅಮಾನತ್ತಿಗೆ ಒತ್ತಾಯಿಸಿ ಪ್ರತಿಭಟನೆ

» ಚಿತ್ರದುರ್ಗ

ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕರ ಆಸ್ಪತ್ರೆ ನಿರ್ದೇಶಕ ಯುವರಾಜ್‌ರನ್ನ ಕೆಲಸದಿಂದ ಅಮಾನತು ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಮಾಧಿಗ ಯುವಸೇನೆವತಿಯಿಂದ ಪ್ರತಿಭಟನೆ ನಡೆಸಲಾಯಿತು.



ಕರ್ನಾಟಕ ರಾಜ್ಯ ಮಾಧಿಗ ಯುವಸೇನೆ ವತಿಯಿಂದ ಮಂಗಳವಾರ ಮಧ್ಯಾಹ್ನ 12 ಗಂಟೆಗೆ ಓಬವ್ವ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ಮೂಲಕ ಬಂದು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಲಾಯಿತು.

ಚಿತ್ರದುರ್ಗ ಜಿಲ್ಲಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೋಧಕರ ಆಸ್ಪತ್ರೆ ನಿರ್ದೇಶಕರಾದ ಯುವರಾಜ್ ರವರನ್ನು ಡಾಕ್ಟರ್‌ಗಳ ನೇಮಕಾತಿಯಲ್ಲಿ ಲಕ್ಷಾಂತರ ಅವ್ಯವಹಾರ ಮಾಡಿದ್ದಾರೆ ಮತ್ತು ನೇಮಕಾತಿಯನ್ನು ಸರಿಯಾಗಿ ಮಾಡಿರುವುದಿಲ್ಲ ಹಾಗೂ ಅಭ್ಯರ್ಥಿಗಳಿಂದ ತಲಾ ಒಬ್ಬರಿಂದ ಲಕ್ಷಾಂತರ ರೂ.ಗಳನ್ನು ಲಂಚವನ್ನುಪಡೆದುಅವ್ಯವಹಾರವಾಗಿರುವ ಶಂಕೆಯಿದೆ ಹಾಗೂ ಯಾವುದೇ ಕೆಲಸಕ್ಕೆ ಹಣ ಕೊಟ್ಟವರಿಗೆ ಕೆಲಸ ಮಾಡುವ ಪ್ರವೃತ್ತಿ ಇವರದ್ದು ಮತ್ತು ಇವರು ಬಿಜೆಪಿಯ ಏಜೆಂಟ್ ಆಗಿರುವುದರಿಂದ ಇವರು ಬಿಜೆಪಿಯವರ ತಳಕ್ಕೆ ತಕ್ಕಂತೆ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಕೆಲಸ ಮಾಡಿಕೊಂಡು ಹೋಗುತ್ತಿದ್ದು, ಇವರು ಭ್ರಷ್ಟನಾಗಿದ್ದು, ಇವರನ್ನು ಕೂಡಲೇ ಅಮಾನತು ಮಾಡಿ ಲೋಕಾಯುಕ್ತರಿಂದಾಗಲೀ ಅಥವಾ ಸಿಐಡಿ ಇಂದ ತನಿಖೆಯನ್ನು ನಡೆಸಿ ಶಿಕ್ಷೆ ಕೊಡಿಸಬೇಕು ಎಂದು ಆಗ್ರಹಿಸಲಾಯಿತು.

ನೇಮಕಾತಿ ಸಂದರ್ಭದಲ್ಲಿ ಯಾರು ನೇಮಕಾತಿ ಮಾಡಿಕೊಳ್ಳಬೇಕು ಯಾರು ನೇಮಕಾತಿ ಮಾಡಿಕೊಳ್ಳಬಾರದು ಸರ್ಕಾರದ ಆದೇಶಗಳನ್ನು ಗಾಳಿಗೆ ತೂರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳಲ್ಲಿ ಬರೀ ಅವ್ಯವಹಾರ ಮಾಡಿರುತ್ತಾರೆ. ಆದ್ದರಿಂದ ಇವರನ್ನು ಮಾಡಿರುವ ನೇಮಕಾತಿಯನ್ನು ರದ್ದುಪಡಿಸಿ ಹೊಸ ನೇಮಕಾತಿಯನ್ನು ಮಾಡಿ ಡಾಕ್ಟರ್‌ಗಳಿಗೆ ನ್ಯಾಯ ದೊರಕಿಸಿಕೊಡಬೇಕು ತನಿಖೆ ಮುಗಿಯುವ ಇವನನ್ನು ಅಮಾನತಿನಲ್ಲಿ ಇರಿಸಬೇಕು. ಸಾರ್ವಜನಿಕವಾಗಿ ಇಂತಹ ಅಧಿಕಾರಿಯಿಂದ ಸರ್ಕಾರಕ್ಕೆ ಕೆಟ್ಟ ಹೆಸರು ಬರುವುದರಿಂದ ಇವರು ಸರ್ಕಾರಿ ಸೇವೆಯಲ್ಲಿ ಮುಂದುವರೆಯಲು ಅನುವು ಮಾಡಿಕೊಡದೆ ಕೂಡಲೇ ಇವರನ್ನು ಅಮಾನತು ಮಾಡಿ, ತನಿಖೆ ಮಾಡಿ ಇವರ ಮೇಲೆ ಕಾನೂನು ಕ್ರಮಕೈಗೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸಲಾಯಿತು.

ಪ್ರತಿಭಟನೆಯ ನೇತೃತ್ವವನ್ನು ರಾಜಣ್ಣ ವಹಿಸಿದ್ದರು. ಓಬಳಮ್ಮ, ತಿಪ್ಪೇಸ್ವಾಮಿ, ಸಂತೋಷ್, ಸಿದ್ದಪ್ಪ, ರುದ್ರಮುನಿ, ವೆಂಕಟೇಶ್,ಶಿವಕುಮಾರ್,ನಾಗಬೂಷಣ್ ಸೇರಿದಂತೆ ಇತರರು ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ಒಂದು ಕೋಟಿ ರೂ. ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ಕಾಮಗಾರಿಗೆ ಚಾಲನೆ



» **ಹೊಳಲ್ಕೆರೆ**

ತಾಲ್ಲೂಕಿನಾದ್ಯಂತಗುಣಮಟ್ಟದರಸ್ತೆ,ಚೆಕ್‌ಡ್ಯಾಂ, ಕೆರೆಕಟ್ಟೆಗಳಿಗೆನೀರುತುಂಬಿಸಿರುವುದುನಾನುಎಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.ಭರಮಸಾಗರ ಹೋಬಳಿಯ ಕೋಗುಂಡೆ ಗ್ರಾಮದಲ್ಲಿ ಕೋಗುಂಡೆಯಿಂದ ಮುಚ್ಚನೂರುವರೆಗೆ ಒಂದು ಕೋಟಿ ರೂ. ವೆಚ್ಚದಲ್ಲಿ ನೂತನ ಡಾಂಬರ್ ರಸ್ತೆ ಕಾಮಗಾರಿಗೆ ಮಂಗಳವಾರ ಭೂಮಿ ಪೂಜೆ ಸಲ್ಲಿಸಿ ಮಾತನಾಡಿದರು.31 ವರ್ಷದ ಕೆಳಗೆ ನಾನು ಶಾಸಕನಾಗಿದ್ದವನು. ಮೊದಲ ಬಾರಿಗೆ ಭರಮಸಾಗರದಲ್ಲಿ ಶಾಸಕನಾದಾಗ ಸರ್ಕಾರದಲ್ಲಿ ನೌಕರರಿಗೆ ಸಂಬಳ ಕೊಡಲು ಹಣವಿರಲಿಲ್ಲ. ಅಂತಹ ಕಷ್ಟದ ಪರಿಸ್ಥಿತಿಯಲ್ಲಿ ಅನುದಾನ ತಂದು ಎಲ್ಲಾ ಹಳ್ಳಿಗಳಲ್ಲಿಯೂ ಟಾರ್ ರಸ್ತೆ ಮಾಡಿಸಿದ್ದರಿಂದ ಅಲ್ಲಿನ ಜನ ರಸ್ತೆ ರಾಜ ಎಂಬ ಬಿರುದು ನೀಡಿ ಎರಡನೆ ಬಾರಿಗೂ ನನ್ನನ್ನು ಗೆಲ್ಲಿಸಿದರು. ಸಾರ್ವಜನಿಕರ ಬದುಕನ್ನು ನನ್ನ ಸ್ವಂತ ಬದುಕೆಂದು ಅರ್ಥಮಾಡಿಕೊಂಡು ಎಲ್ಲೆಲ್ಲಿ ಏನು ಕೆಲಸ ಮಾಡಿದರೆ ಜನರಿಗೆ ಅನುಕೂಲವಾಗುತ್ತದೆ ಎನ್ನುವ ಪ್ರಜ್ಞೆಯಿಟ್ಟುಕೊಂಡು ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆಂದು ಹೇಳಿದರು.ರೈತರಿಗೆ ವಿದ್ಯುತ್ ಸಮಸ್ಯೆಯಾಗಬಾರದೆಂದು ಚಿಕ್ಕಜಾಜೂರಿನ ಕೋಟೆಹಾಳ್ ಬಳಿ ಐದು ನೂರು ಕೋಟಿ ರೂ. ವೆಚ್ಚದಲ್ಲಿ ನಾಲ್ಕು ನೂರು ಕೆ.ವಿ. ವಿದ್ಯುತ್ ಸ್ಥಾವರ ನಿರ್ಮಾಣವಾಗುತ್ತಿದೆ. ಇದರಿಂದ ಇನ್ನು ನೂರು ವರ್ಷಗಳ ಕಾಲ ಕರೆಂಟ್‌ಗೆ ಅಭಾವವಿರುವುದಿಲ್ಲ. ತಾಲ್ಲೂಕಿನಾದ್ಯಂತ ಗುಣಮಟ್ಟದ ರಸ್ತೆ, ಶಾಲಾ-ಕಾಲೇಜುಗಳು, ಕೆರೆ ಕಟ್ಟೆಗಳನ್ನು ನಿರ್ಮಿಸಿದ್ದೇನೆ. ಹೈಟೆಕ್ ಆಸ್ಪತ್ರೆ, ಸ್ಟೇಡಿಯಂ, ಈಜುಕೊಳ, ಒಳಾಂಗಣ ಕ್ರೀಡಾಂಗಣವಾಗಿದೆ. ಎಲ್ಲಿಯೂ ಇಂತಹ ಕೆಲಸ ಆಗಿಲ್ಲ ಅಂತ ಇಲ್ಲ. ನೀವುಗಳು ನನಗೆ ಮತ ನೀಡಿ ಗೆಲ್ಲಿಸಿದ್ದೀರ. ಋಣ ತೀರಿಸುವ ಕೆಲಸ ಮಾಡುತ್ತೇನೆಂದು ಶಾಸಕ ಡಾ.ಎಂ.ಚಂದ್ರಪ್ಪ ಭರವಸೆ ನೀಡಿದರು.ಭರಮಸಾಗರ ಬಿಜೆಪಿ. ಮಂಡಲ ಅಧ್ಯಕ್ಷ ಶೈಲೇಶ್, ಮಂಜುನಾಥ್, ಡಿ.ಎಸ್.ಪ್ರವೀಣ್‌ಕುಮಾರ್, ವಿರುಪಾಕ್ಷಪ್ಪ, ಗ್ರಾಮ ಪಂಚಾಯಿತಿ ಸದಸ್ಯರುಗಳು ಹಾಗೂ ಗ್ರಾಮದ ಮುಖಂಡರುಗಳು ಈ ಸಂದರ್ಭದಲ್ಲಿ ಹಾಜರಿದ್ದರು.

## ಅವಧಿ ವಿಸ್ತರಣೆ

» **ದಾವಣಗೆರೆ**

ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಜಿಲ್ಲಾ ವ್ಯಾಪ್ತಿಯ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಐಐಎಸ್ಸಿ, ಐಐಟಿ ಮತ್ತು ನೀಟ್ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಅಂಡ್ ಮಶಿನ್ ಲರ್ನಿಂಗ್ ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ ತರಬೇತಿ ನೀಡಲು ಅರ್ಜಿ ಸಲ್ಲಿಸುವ ಅವಧಿಯನ್ನು ಏಪ್ರಿಲ್ 25 ರವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ, ತರಬೇತಿ ನೀಡುವ ಸಂಬಂಧ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಏ.25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸರ್ಕಾರದ ಆದೇಶದಂತೆ IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವ್ಯಕ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ರೂ.15,000/-ಗಳ ಶಿಷ್ಯವೇತನ ನೀಡಲಾಗುವುದು. ಅರ್ಜಿ ನಮೂನೆಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ಇಲ್ಲಿ ಪಡೆಯಬಹುದು.

## ಏ.24ರಂದು ಕೌನ್ಸಿಲ್ ಸಾಮಾನ್ಯ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆ ಕೌನ್ಸಿಲ್ ಸಾಮಾನ್ಯ ಸಭೆಯನ್ನು ಇದೇ ಏಪ್ರಿಲ್ 24ರಂದು ಬೆಳಿಗ್ಗೆ 11ಕ್ಕೆ ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ಸಭೆಯ ಅಧ್ಯಕ್ಷತೆ ವಹಿಸುವರು.

### ಶೇ.100ರಷ್ಟು ಕರ ವಸೂಲಾತಿ ಮಾಡಿದ ಪಿಡಿಒ, ಕರವಸೂಲಿಗಾರರಿಗೆ ಸನ್ಮಾನ

# ಪಂಚಾಯತಿಗಳ ಸಮಗ್ರ ಅಭಿವೃದ್ಧಿಗೆ ಕರ ವಸೂಲಿ ಅತ್ಯಗತ್ಯ: ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್

» **ಚಿತ್ರದುರ್ಗ**

ವ್ಯವಸ್ಥಿತವಾಗಿ ಯೋಜನೆ ರೂಪಿಸಿಕೊಳ್ಳುವ ಮೂಲಕ ಶೇ.100ರಷ್ಟು ಕರ ವಸೂಲಾತಿಯಲ್ಲಿ ಸಾಧನೆ ಮಾಡಬಹುದಾಗಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಪರಿಣಾಮಕಾರಿಯಾಗಿ ಕರ ವಸೂಲಾತಿ ಮಾಡಬೇಕಿದೆ. ಪಂಚಾಯತಿಗಳ ಸಮಗ್ರ ಅಭಿವೃದ್ಧಿಗೆ ಕರ ವಸೂಲಿ ಅತ್ಯಗತ್ಯ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಶೇ.100 ರಷ್ಟು ಕರ ವಸೂಲಾತಿ ಮಾಡಿದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ಕರ ವಸೂಲಿಗಾರರಿಗೆ ಸನ್ಮಾನಿಸಿ ಅವರು ಮಾತನಾಡಿದರು.

ಕರ ವಸೂಲಾತಿ ಅಂದೋಲನ, ಜಾಗೃತಿ, ಸಮನ್ವಯತೆ, ಯೋಜಿತ ಯೋಜನೆ, ತಂತ್ರಜ್ಞಾನ ಬಳಕೆ ಮಾಡುವ ಮೂಲಕ ಜಿಲ್ಲೆಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಶೇ.100 ರಷ್ಟು ಕರ ವಸೂಲಾತಿ ಮಾಡಿರುವುದು ಉತ್ತಮ ಬೆಳವಣಿಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮ ಪಂಚಾಯಿತಿ ತೆರಿಗೆಯಿಂದ




ಸಂಗ್ರಹಿಸುವ ಆದಾಯವನ್ನು ತನ್ನ ಆಡಳಿತ ವ್ಯವಸ್ಥೆಯಲ್ಲಿ ಕೆಲಸ ನಿರ್ವಹಿಸುವ ನೌಕರರ ಸಂಬಳ, ಗ್ರಾಮದ ಅಭಿವೃದ್ಧಿಗೆ ಮತ್ತು ಅಲ್ಲಿನ ನಿವಾಸಿಗಳ ಮೂಲಭೂತ ಸೌಕರ್ಯ ಒದಗಿಸಲು ಬಳಸಲಾಗುತ್ತಿದೆ ಎಂದು ಹೇಳಿದರು.ಚಿತ್ರದುರ್ಗ ತಾಲ್ಲೂಕು ಪಂಚಾಯತಿಕಾರ್ಯನಿರ್ವಾಹಕಅಧಿಕಾರಿ ವೈ.ರವಿಕುಮಾರ್ ಮಾತನಾಡಿ,ಪ್ರತಿನಿತ್ಯವೂ ಜಿ.ಪಂ ಸಿಇಒ, ಮುಖ್ಯ ಕಾರ್ಯದರ್ಶಿ, ಮುಖ್ಯ ಯೋಜನಾಧಿಕಾರಿಗಳು ಸಭೆ, ವಿಡಿಯೋ ಕಾನ್ಫರೆನ್ಸ್‌ನಲ್ಲಿ ಚರ್ಚಿಸಿ, ಅವರು ನೀಡಿರುವ ಮಾರ್ಗದರ್ಶನದಂತೆ ಕರ ವಸೂಲಾತಿ ಅಭಿಯಾನ ನಡೆಸಿ, ಕರ ವಸೂಲಾತಿಯಲ್ಲಿ ಉತ್ತಮ ಸಾಧನೆ ತೋರಲು ಸಾಧ್ಯವಾಯಿತು. ಪ್ರಸಕ್ತ ವರ್ಷ ಶೇ.100ರಷ್ಟು ಕರವಸೂಲಾತಿ ಸಾಧನೆಗೆ ಈಗಾಗಲೇ ಯೋಜನೆ ರೂಪಿಸಲಾಗಿದ್ದು, ಕಾರ್ಯಗತಗೊಳಿಸಲಾಗುತ್ತಿದೆ. ಶೇ.100ರಷ್ಟು ಕರ ವಸೂಲಾತಿಗೆ ಕ್ರಮ ವಹಿಸಲಾಗುವುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ನರೇಗಾ ಸಹಾಯಕ ನಿರ್ದೇಶಕ ಹೆಚ್.ಯರ್ರಿಸ್ವಾಮಿ ಮಾತನಾಡಿ, ಬರ ಪೀಡಿತ ಚಿತ್ರದುರ್ಗ ಜಿಲ್ಲೆಯಲ್ಲಿ ಹೆಚ್ಚು ಸಂಪನ್ಮೂಲ ಕ್ರೂಢೀಕರಣ, ಬೇರೆ ಜಿಲ್ಲೆಗಳಿಗೆ ಸರಿ ಸಮನಾಗಿ ಕರ ವಸೂಲಾತಿ ಆಗಿರುವುದಕ್ಕೆ ಜಿ.ಪಂ ಸಿಇಒ ಸೋಮಶೇಖರ್ ಅವರ ನಿರಂತರ ಮಾರ್ಗದರ್ಶನ ಕಾರಣವಾಗಿದೆ. 05 ಗ್ರಾಮ ಪಂಚಾಯಿತಿಗೆ ಒಬ್ಬರಂತೆ ನೋಡಲ್ ಅಧಿಕಾರಿ ನೇಮಕ, ಪಿಡಿಒ, ಬಿಲ್ ಕಲೆಕ್ಟರ್ ಮನೆ ಮನೆ ಭೇಟಿ ನೀಡುವ ಮೂಲಕ ಕರ ವಸೂಲಾತಿಯಲ್ಲಿ ಉತ್ತಮ ಸಾಧನೆ ಮಾಡಲು ಸಾಧ್ಯವಾಯಿತು. ಕುಡಿಯುವ ನೀರು, ನೈರ್ಮಲ್ಯ, ಬೀದಿದೀಪ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳಿಗೆ ಕರ ವಸೂಲಾತಿ ಹಣ ಸದ್ಬಳಕೆ ಆಗಲಿದೆ ಎಂದು ಹೇಳಿದರು. ಚಿತ್ರದುರ್ಗ ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ ಶೇ.100ರಷ್ಟು ಕರ ವಸೂಲಾತಿ ಸಾಧನೆ ತೋರಿದ ಇಂಗಳದಾಳ ಗ್ರಾಮ ಪಂಚಾಯಿತಿ ಪಿಡಿಒ ವಿದ್ಯಾಶ್ರೀ, ಕರವಸೂಲಿಗಾರ ಹೆಚ್.ನಾಗರಾಜ್, ಮಾಡನಾಯಕನಹಳ್ಳಿ ಪಿಡಿಒ ಟಿ.ಲಲಿತಾ, ಕರವಸೂಲಿಗಾರ ಎಸ್.ಎನ್.ಮಲ್ಲಿಕಾ, ಮಲ್ಲಾಡಿಹಳ್ಳಿ ಪಿಡಿಒ ಈ.ಚೂಡಾಮಣಿ ಕರವಸೂಲಿಗಾರ ಎಂ.ನವೀನ್ ಕುಮಾರ್, ಗುಂಡೇರಿ ಪಿಡಿಒ ಎಸ್.ಉಷಾ, ಕರವಸೂಲಿಗಾರ ಜಿ.ಕೆ.ಶಿವಕುಮಾರ್, ಮತ್ತೋಡು ಪಿಡಿಒ ಜಿ.ಶೇಖರಪ್ಪ, ಕರವಸೂಲಿಗಾರ ಎಸ್. ಈಶ್ವರಪ್ಪ, ಲಕ್ಕಿಹಳ್ಳಿ ಪಿಡಿಒ ಎನ್. ಹನುಮಂತಪ್ಪ, ಕರವಸೂಲಿಗಾರ ಕುಮಾರ್, ಕಂಗುವಳ್ಳಿ ಪಿಡಿಒ ಎಸ್. ಗೋವಿಂದ ರಾಜು, ಕರವಸೂಲಿಗಾರ ಟಿ.ಧನಂಜಯ, ಬೋಕಿಕೆರೆ ಪಿಡಿಒ ಬಿ.ಆರ್.ಜಯಣ್ಣ, ಕರವಸೂಲಿಗಾರ ಟಿ.ಮಂಜುನಾಥ್, ದೊಡ್ಡ ಉಳ್ಳಾರ್ತಿ ಪಿಡಿಒ ಸುರೇಶ್, ಕರವಸೂಲಿಗಾರ ಬಿ.ಜಯರಾಮ್, ಅಬ್ಬೇನಹಳ್ಳಿ ಪಿಡಿಒ ಎಂ.ಮೋಹನ್ ದಾಸ್, ಕರವಸೂಲಿಗಾರ ಶೇಖರಪ್ಪ ಹಾಗೂ 2024-25ನೇ ಸಾಲಿನಲ್ಲಿ ಕರವಸೂಲಿಯಲ್ಲಿ ಜಿಲ್ಲೆಯಲ್ಲಿ ಶೇ.77.58 ರಷ್ಟು ಸಾಧನೆ ಮಾಡಿರುವ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ. ರವಿಕುಮಾರ್ ಹಾಗೂ ನರೇಗಾ ಸಹಾಯಕ ನಿರ್ದೇಶಕ ಹೆಚ್.ಯರ್ರಿಸ್ವಾಮಿ ಅವರನ್ನು ಜಿಲ್ಲಾ ಪಂಚಾಯಿತಿ ಸಿಇಒ ಎಸ್. ಜೆ.ಸೋಮಶೇಖರ್ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿದರು ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಮುಖ್ಯ ಲೆಕ್ಕಾಧಿಕಾರಿ ಮಧು, ಜಿಲ್ಲಾ ಯೋಜನಾ ವ್ಯವಸ್ಥಾಪಕ (ಇ-ಆಡಳಿತ) ಹೆಚ್.ಶಶಿಧರ್, ಸಹಾಯಕ ಜಿಲ್ಲಾ ಯೋಜನಾ ವ್ಯವಸ್ಥಾಪಕಿ ಸೈಯದ್ ಪಿಜಾ ಏ ಇರಮ್, ನರೇಗಾ ಶಾಖೆಯ ವ್ಯವಸ್ಥಾಪಕ ಸುನೀಲ್, ಜಿಲ್ಲಾ ನರೇಗಾ ಎಡಿಪಿಸಿ ಮೋಹನ್, ಜಿಲ್ಲಾ ಐಇಸಿ ಸಮಾಲೋಚಕ ಬಿ.ಸಿ. ನಾಗರಾಜ್ ಸೇರಿದಂತೆ ಮತ್ತಿತರರು ಇದ್ದರು.

# ಮೇಲುದುರ್ಗದ ಸಂಪಿಗೆ ಸಿದ್ದೇಶ್ವರ ಸ್ವಾಮಿ ಹಾಗೂ ಶ್ರೀ ವೀರಭದ್ರಸ್ವಾಮಿಯ ಗುಗ್ಗಳ

» **ಚಿತ್ರದುರ್ಗ**

ನಗರದ, ನಗರ ದೇವರಾಗಿ ಮೇಲುದುರ್ಗದಲ್ಲಿ ನೆಲೆಸಿರುವ ಶ್ರೀ ಸಂಪಿಗೆ ಸಿದ್ದೇಶ್ವರ ಸ್ವಾಮಿ ಹಾಗೂ ಶ್ರೀ ವೀರಭದ್ರಸ್ವಾಮಿಯ ಗುಗ್ಗಳ ಮತ್ತು ಕೆಂಡಾರ್ಚನೆಯನ್ನು ಇಂದು ಅದ್ದೂರಿಯಾಗಿ ನಡೆಸಲಾಯಿತು.

ಗುಗ್ಗಳ ಮತ್ತು ಕೆಂಡಾರ್ಚನೆಯನ್ನು ಪ್ರತಿ ಮೂರು ವರ್ಷಗಳಿಗೊಂದು ಸಾರಿ ನೆರವೇರಿಸುತ್ತಿದ್ದು ಏ. 21ನೇ ಸೋಮವಾರ ರಾತ್ರಿ 8. ಗಂಟೆಯಿಂದ, ಗಂಗಾಪೂಜೆ, ಕಾಳಿಕಾದೇವಿ ಸ್ಥಾಪನೆ, ಕಂಕಣಧಾರಣೆ, ರುದ್ರಾಭಿಷೇಕ, ಬಿಲ್ವಾರ್ಚನೆ, ಶ್ರೀ ಅಮ್ಮನವರಿಗೆ ಕುಂಕುಮಾರ್ಚನೆ ರುದ್ರಹೋಮ ಇತ್ಯಾದಿ ಕಾರ್ಯಕ್ರಮಗಳು ನಡೆದಿದ್ದು, ಏ. 22ನೇ ಮಂಗಳವಾರ ಬೆಳಗಿನ ಜಾವ ಮಹಾ ಮಂಗಳಾರತಿ ನಂತರ ಶ್ರೀ ಸಂಪಿಗೆ ಸಿದ್ದೇಶ್ವರ ದೇವಾಲಯದ ಮುಂಭಾಗದಲ್ಲಿ "ಕೆಂಡಾರ್ಚನೆ" ನಂತರ "ಅಡ್ಡಪಲ್ಲಕ್ಕಿ ಉತ್ಸವ" ನೆರವೇರಿಸಲಾಯಿತು.

ಗುಗ್ಗಳ ಸಾಗುವ ದಾರಿಯಲ್ಲಿ ಶ್ರೀ ವೀರಭದ್ರ ಸ್ವಾಮಿಯ ಭಕ್ತಾಧಿಗಳು ತಮ್ಮ ಮನೆಯ ಮುಂದೆ ಗುಗ್ಗಳ ಆಗಮಿಸಿದಾಗ ನೀರು ರಂಗೋಲಿಯನ್ನು ಹಾಕಿ ಗುಗ್ಗಳವನ್ನು ಸ್ವಾಗತಿಸಿ ಸ್ವಾಮಿಗೆ ತೆಂಗಿನಕಾಯಿ, ಹೂವು, ಬಾಳೆ ಹಣ್ಣನ್ನು ನೀಡಿ ಪೂಜೆಯನ್ನು ಸಲ್ಲಿಸಿ ತಮ್ಮ ಶಕ್ತಾನುಸಾರ ಭಕ್ತಿಯ ಕಾಣಿಕೆಯನ್ನು ಸಲ್ಲಿಸಿದರು.

ಕೆಂಡಾರ್ಚನೆನಂತರಶ್ರೀಸಂಪಿಗೆಸಿದ್ದೇಶ್ವರಸ್ವಾಮಿ ಹಾಗೂ ಶ್ರೀ ವೀರಭದ್ರಸ್ವಾಮಿಯವರ ಅಡ್ಡಪಲ್ಲಕ್ಕಿ ಉತ್ಸವವು ಗುಗ್ಗಳ ಕೊಡಗಳ



ಸಹಿತ ರಾಣೇಬೆನ್ನೂರಿನ ಬಸವಣ್ಣಪ್ಪ ಹಾಗೂ ವೃಂದದವರಿಂದ ಶ್ರೀ ವೀರಭದ್ರ ಸ್ವಾಮಿಯವರ ವಚನಾಮೃತಗಳೊಂದಿಗೆ ಪುರುವಂತರು ಹಾಗೂ ಚಮ್ಮೇಳನದವರು, ಶ್ರೀ ಬ್ರಹ್ಮಲಿಂಗೇಶ್ವರ ಸಮಾಳ ಸಂಘ, ಹಾರಕನಾಳು ಮತ್ತು ನಾಣ್ಯಪುರ ಇವರ ಮುಂದಾಳತ್ವದಲ್ಲಿ ನಂದಿ ಧ್ವಜ ಕುಣಿತದೊಂದಿಗೆ ಮೇಲುದುರ್ಗದಿಂದ ಕೆಳಗಿಳಿದು ಶ್ರೀ ಗಾರೇಬಾಗಿಲು ಈಶ್ವರ ದೇವಾಲಯದ ಮುಂಭಾಗದಿಂದ ರಾಜ ಉತ್ಸವಾಂಬ ದೇವಾಲಯ, ದೊಡ್ಡಪೇಟೆ, ರಂಗಯ್ಯನಬಾಗಿಲು, ಬಸವಮಂಟಪ ರಸ್ತೆ, ಧರ್ಮಶಾಲಾ ರಸ್ತೆಯಲ್ಲಿರುವ ಅರಳಿಮರ ಮುಂಭಾಗದಿಂದ ಮೈಸೂರು ಬ್ಯಾಂಕ್ ವೃತ್ತ, ಪೂನಾ ಬೆಂಗಳೂರು ರಸ್ತೆ, ಸಂತೇಪೇಟೆಯಲ್ಲಿರುವ ಗಾಂಧಿವೃತ್ತ ಶ್ರೀ ನೀಲಕಂಠೇಶ್ವರ ದೇವಸ್ಥಾನ ಹಳೇ ಇಂಡಿಯನ್ ಬ್ಯಾಂಕ್ ಪಕ್ಕದಿಂದ ಆನೇಬಾಗಿಲು, ಚಿಕ್ಕಪೇಟೆ ಮೂಲಕ ಮೇಲುದುರ್ಗದಲ್ಲಿರುವ ದೇವಸ್ಥಾನ ಸೇರಿತು.

ಮಂಗಳವಾರ ಬೆಳಿಗ್ಗೆ ಸಾರ್ವಜನಿಕವಾಗಿ "ಅನ್ನಸಂತರ್ಪಣೆ"ಯನ್ನು ಏರ್ಪಡಿಸಲಾಗಿದ್ದು, ಸಕಲ ಭಕ್ತಾದಿಗಳು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಶ್ರೀ ಸ್ವಾಮಿಯ ಕೃಪಾಶೀರ್ವಾದಕ್ಕೆ ಪಾತ್ರರಾದರು. ಈ ಎಲ್ಲಾ ಕಾರ್ಯಕ್ರಮವನ್ನು ಶ್ರೀ ಸಂಪಿಗೆ ಸಿದ್ದೇಶ್ವರ ಸೇವಾ ಸಮಿತಿಯ ಅಧ್ಯಕ್ಷರಾದ ಪಿ.ಎನ್.ಸಿದ್ದರಾಜು ನೇತೃತ್ವದಲ್ಲಿ ನಡೆಸಲಾಯಿತು.

## ಧಾರ್ಮಿಕಪರಂಪರೆಯ ಸಂರಕ್ಷಕ ಜಗಜ್ಯೋತಿ ಬಸವೇಶ್ವರರು: ತಹಶೀಲ್ದಾರ್ ರೇಹಾನ್‌ಪಾಷ



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಬಸವಜಯಂತಿ ಉತ್ಸವವನ್ನು ಸಂಭ್ರಮದಿಂದ ಆಚರಿಸಲು ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ, 12ನೇ ಶತಮಾನದಿಂದ ನಾಡಿನೆಲ್ಲೆಡೆ ಧಾರ್ಮಿಕ ಪರಂಪರೆಯನ್ನು ಗೌರವಿಸುವ ಶಖೆ ಆರಂಭವಾಗಿದ್ದು, ಇದರ ಕೀರ್ತಿ ಜಗಜ್ಯೋತಿಬಸವೇಶ್ವರರಿಗೆ ಸಲ್ಲುತ್ತದೆ. ಈ ನಿಟ್ಟಿನಲ್ಲಿ ಏ.30ರಂದು ಆಚರಿಸುವ ಬಸವಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಮುದಾಯದ ಮುಖಂಡರು ಮುಂದಾಗಬೇಕೆಂದು ತಿಳಿಸಿದರು.

ಪೂರ್ವಬಾವಿ ಸಭೆಯಲ್ಲಿ ಭಾಗವಹಿಸಿದ್ದ ಸಮುದಾಯದ ಅನೇಕ ನಾಯಕರು ಬಸವ ಜಯಂತಿ ಕಾರ್ಯಕ್ರಮಕ್ಕೆ ತಾಲ್ಲೂಕು ಆಡಳಿತ ಸಕರಾತ್ಮಕವಾಗಿ ಸ್ಪಂದಿಸುತ್ತಾ ಬಂದಿದೆ. ನಗರದ ವೀರಶೈವ ಕಲ್ಯಾಣಮಂಟಪದಲ್ಲಿ ವೀರಶೈವ ಸಂಘಟನೆಗಳ ಸಹಯೋಗದೊಂದಿಗೆ ಬಸವಜಯಂತಿ ಕಾರ್ಯಕ್ರಮವನ್ನು ಅದ್ದೂರಿಯಾಗಿ ಕಲ್ಯಾಣಮಂಟಪದಲ್ಲಿ ಆಚರಿಸಲಿದ್ದು ಎಲ್ಲರೂ ಕೈಜೋಡಿಸುವಂತೆ ಮನವಿ ಮಾಡಲಾಯಿತು.

ಪೂರ್ವಬಾವಿ ಸಭೆಯಲ್ಲಿ ವೀರಶೈವ ಸೇವಾಸಮಾಜ ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ವಿ.ಪ್ರಸನ್ನಕುಮಾರ್(ಹೊಸಮನೆಸ್ವಾಮಿ), ಉಪಾಧ್ಯಕ್ಷ ಕೆ.ಎಂ.ಜಗದೀಶ್, ಕಿರಣ್, ಲೋಕೇಶ್, ಶಿವಕುಮಾರ್, ಮುರುಗೇಶ್, ಶಿವಸ್ವಾಮಿ, ಬಿ.ಎಂ.ಭಾಗ್ಯಮ್ಮ, ವೃಷಬೇಂದ್ರಪ್ಪ, ಮಾಲತೇಶ್ ಮುಂತಾದವರು ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಜನಾಕ್ರೋಶ ಯಾತ್ರೆ ಏ.25 ರಂದು ಚಿತ್ರದುರ್ಗಕ್ಕೆ ಆಗಮನ

» **ಹೊಳಲ್ಕೆರೆ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗಿದೆ. ಗ್ಯಾರೆಂಟಿ ನೆಪದಲ್ಲಿ ಒಂದು ಕೈಯಲ್ಲಿ ಕೊಟ್ಟು ಎರಡು ಕೈಯಲ್ಲಿ ಕಸಿದುಕೊಳ್ಳುವ ಸರ್ಕಾರದ ವಿರುದ್ದ ಜನಾಕ್ರೋಶ ಭುಗಿಲೆದ್ದಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯಾದ್ಯಂತ ನಡೆಯುತ್ತಿರುವ ಜನಾಕ್ರೋಶ ಯಾತ್ರೆ ಏಪ್ರಿಲ್ 25 ರಂದು ಚಿತ್ರದುರ್ಗಕ್ಕೆ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಭರಮಸಾಗರದ ಪ್ರವಾಸಿ ಮಂದಿರದಲ್ಲಿಮಂಗಳವಾರಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಸ್ವಜನಪಕ್ಷಪಾತ, ಮಿತಿ ಮೀರಿದ ಭ್ರಷ್ಟಾಚಾರವಷ್ಟೆ ಅಲ್ಲದೆ ಜನಸಾಮಾನ್ಯರು ಬಳಸುವ ದಿನನಿತ್ಯದ ಪದಾರ್ಥಗಳ ಬೆಲೆ ಏರಿಕೆಯಿಂದ ರಾಜ್ಯದ ಜನ ಆಕ್ರೋಶಗೊಂಡಿದ್ದಾರೆ. ವಿಧಾನಸಭೆ



ಚುನಾವಣೆ ಪೂರ್ವದಲ್ಲಿ ಐದು ಉಚಿತ ಗ್ಯಾರೆಂಟಿಗಳನ್ನು ಘೋಷಿಸಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೊಟ್ಟ ಮಾತು ಉಳಿಸಿಕೊಳ್ಳಲು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭಿವೃದ್ದಿಗಾಗಿ ಬಳಸಬೇಕಾಗಿರುವ ಹಣವನ್ನು ಗ್ಯಾರೆಂಟಿಗಳಿಗೆ ಖರ್ಚು ಮಾಡುತ್ತ ದಲಿತ ವಿರೋಧಿ ಎನ್ನುವುದನ್ನು ಸಾಬೀತುಪಡಿಸಿದೆ. ಪ್ರತಿ ಜಿಲ್ಲೆಯಲ್ಲಿಯೂ ಜನಾಕ್ರೋಶ ಯಾತ್ರೆ ನಡೆಯುತ್ತಿದೆ. ಚಿತ್ರದುರ್ಗಕ್ಕೆ ಬರುವ ಯಾತ್ರೆಗೆ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಇನ್ನೆರಡು ಮೂರು ತಿಂಗಳಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಯಲಿದೆ. ನಮ್ಮ ಪಕ್ಷದ ಅಭ್ಯರ್ಥಿಗಳು ಚುನಾವಣೆಯಲ್ಲಿ ಗೆಲ್ಲಬೇಕಾಗಿರುವುದರಿಂದಕಾರ್ಯಕರ್ತರು ಈಗಿನಿಂದಲೇ ಸಿದ್ದರಾಗಬೇಕು. ಚುನಾವಣೆಗೆ ನನ್ನ ಸಂಪೂರ್ಣ ಸಹಕಾರವಿದೆ ಎಂದು ಹೇಳಿದರು.

ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಭರಮಸಾಗರ ಮಂಡಲ ಅಧ್ಯಕ್ಷ ಶೈಲೇಶ್, ಮಲ್ಲಣ್ಣ, ಡಿ.ಎಸ್. ಪ್ರವೀಣ್‌ಕುಮಾರ್, ಮಂಜುನಾಥ್, ತಿಪ್ಪಣ್ಣ

ಸಂದೀಪ್, ಭರಮಸಾಗರ ಮಂಡಲ ಪದಾಧಿಕಾರಿಗಳು, ಕಾರ್ಯಕರ್ತರು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T